MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 05 | ಸಂಚಿಕೆ: 31 | ಭಾನುವಾರ : 16-11-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 31 | SUNDAY : 16-11-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ನಿಗದಿತ ಸಮಯದೊಳಗೆ ಸೂಕ್ತ ಗುಣಮಟ್ಟದಿಂದ ಕಾಮಗಾರಿ ಮುಗಿಸಿ– ಶಾಸಕ ಆರ್. ಬಸನಗೌಡ

ಯುವ ಮಾರ್ಗ ಸುದ್ದಿ



**ಮಸ್ಕಿ,ನ.15–** ತಾಲ್ಲೂಕಿನ ಅಭಿವೃದ್ಧಿ ಕೆಲಸಗಳಿಗೆ ಮತ್ತಷ್ಟು ಬಲ ನೀಡುವ ಉದ್ದೇಶದಿಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ಖಾದಿ ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷ ಆರ್. ಬಸನಗೌಡ ತುರ್ವಿಹಾಳ ಅವರು ಶನಿವಾರ ಪಟ್ಟಣದ ವಿವಿಧ ಕಡೆಗಳಲ್ಲಿ ಪರಿಶೀಲನೆ ನಡೆಸಿದರು. ಮೊದಲು ಪಟ್ಟಣದಲ್ಲಿ ಸುಮಾರು 8 ಕೋಟಿ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ತಾಲ್ಲೂಕು ಆಡಳಿತದ ಪ್ರಜಾಸೌಧ ಕಟ್ಟಡವನ್ನು ಪರಿಶೀಲಿಸಿದ ಅವರು, ಕಾಮಗಾರಿ ಗುಣಮಟ್ಟ ಹಾಗೂ ಪ್ರಗತಿ ಕುರಿತು ಅಧಿಕಾರಿಗಳಿಂದ ವಿವರ ಪಡೆದು, "ಸಾರ್ವಜನಿಕ ಉಪಯೋಗದ ಪ್ರತೀ ಕಟ್ಟಡ ಸಮಯಕ್ಕೆ, ಗುಣಮಟ್ಟಕ್ಕೆ ಯಾವುದೇ ವಿಲ್ಲದೆ ಪೂರ್ಣಗೊಳ್ಳಬೇಕು" ಎಂದು ಸ್ಪಷ್ಟ ಸೂಚನೆ ನೀಡಿದರು.

ನಂತರ ಅವರು ಸರ್ಕಾರಿ ಪಬ್ಲಿಕ್ ಶಾಲೆಗೆ ದಿಢೀರ್ ಭೇಟಿ ನೀಡಿ, ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಅವರ ವಿದ್ಯಾಭ್ಯಾಸ, ತರಗತಿ ವಾತಾವರಣ, ಶೈಕ್ಷಣಿಕ ಸೌಲಭ್ಯಗಳ ಬಗ್ಗೆ ವಿಚಾರಿಸಿದರು. ಶಾಲೆಯ ಬಿಸಿಯೂಟ ಕೋಣೆ, ಅಡುಗೆ ವ್ಯವಸ್ಥೆ, ನೀರು ಸ್ವಚ್ಛತೆ, ಮಕ್ಕಳ ಆರೋಗ್ಯದ ದೃಷ್ಟಿಯಿಂದ ಅಗತ್ಯ ಕ್ರಮಗಳು ಸರಿಯಾಗಿ ಅನುಸರಿಸಲಾಗುತ್ತಿರುವುದನ್ನು ಪರಿಶೀಲಿಸಿದರು. ಇದೆ ವೇಳೆ ಕಲ್ಯಾಣ ಸಾರಿಗೆ ಸಂಸ್ಥೆಯ ಘಟಕಕ್ಕೂ ಭೇಟಿ ನೀಡಿ ಕೆಲಸದ ವ್ಯವಸ್ಥೆಗಳು ಸರಿಯಾಗಿ ನಡೆಯುತ್ತಿವೆಯೇ ಎಂದು ಪರಿಶೀಲಿಸಿದರು. ಪರಿಶೀಲನಾ ಪ್ರವಾಸದಲ್ಲಿ ಪುರಸಭೆ ಸದಸ್ಯರು ದೊಡ್ಡ ಕರಿಯಪ್ಪ, ಶಿವು ಬ್ಯಾಳಿ, ಕೃಷ್ಣ ಡಿ. ಚಿಗರಿ, ನಾರಾಯಣಪ್ಪ ಕಾಸ್ಲಿ, ಮಲ್ಲಯ್ಯ ಮುರಾರಿ, ಶಿವರೆಡ್ಡಿ, ರವಿ ಮಡಿವಾಳ, ನಾಗರಾಜ ಗುಡಿಸಲಿ ಸೇರಿದಂತೆ ಸ್ಥಳೀಯ ನಾಯಕರೂ, ಅಧಿಕಾರಿಗಳೂ ಭಾಗವಹಿಸಿದರು.

ತಾರಾನಾಥ ಶಿಕ್ಷಣ ಸಂಸ್ಥೆ– ಅಮೃತ ಮಹೋತ್ಸವ ಸಮಾರೋಪ ಸಮಾರಂಭ

## ಉತ್ತಮ ಗುಣಮಟ್ಟದ ಶಿಕ್ಷಣ ನೀಡುವಲ್ಲಿ ತಾರಾನಾಥ ಶಿಕ್ಷಣ ಸಂಸ್ಥೆ ಹೆಸರುವಾಸಿ : ಎನ್.ಎಸ್ ಬೋಸರಾಜು

ಯುವ ಮಾರ್ಗ ಸುದ್ದಿ




**ರಾಯಚೂರು,ನ.15–**ಮಕ್ಕಳು ಶಿಕ್ಷಣ ಕಲಿಕೆಗೆ ಪೂರಕ ಸೌಲಭ್ಯಗಳಿಲ್ಲದ ಸಂದರ್ಭದಲ್ಲಿ ತಾರಾನಾಥ ಶಿಕ್ಷಣ ಸಂಸ್ಥೆ ಈ ಭಾಗದಲ್ಲಿ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಿದೆ. ನಿರಂತರವಾಗಿ ಸುಮಾರು 6–7 ದಶಕಗಳ ಕಾಲ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ತಾರಾನಾಥ ಶಿಕ್ಷಣ ಸಂಸ್ಥೆ ಕಾರ್ಯ ಶ್ಲಾಘನೀಯವಾಗಿದೆ ಅಲ್ಲದೆ ಜಿಲ್ಲೆಯಲ್ಲಿ ಮೊದಲಬಾರಿಗೆ ಕಾನೂನು ಮಹಾವಿದ್ಯಾಲಯ ಸ್ಥಾಪಿಸಿದ ಕೀರ್ತಿ ಈ ಸಂಸ್ಥೆಗಿದೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಎನ್ ಎಸ್ ಬೋಸರಾಜು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ರಾಯಚೂರಿನ ಎಲ್ ವಿ ಡಿ ಮಹಾವಿದ್ಯಾಲಯದಲ್ಲಿ ಇಂದು ನಡೆದ ಕಲ್ಯಾಣ ಕರ್ನಾಟಕ ಭಾಗದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ರಾಯಚೂರಿನ ತಾರಾನಾಥ್ ಶಿಕ್ಷಣ ಸಂಸ್ಥೆಯ ಲಕ್ಷ್ಮೀ ವೆಂಕಟೇಶ ದೇಸಾಯಿ ಮಹಾವಿದ್ಯಾಲಯದ ಅಮೃತ ಮಹೋತ್ಸವ ಹಾಗೂ ಬಂಕಟಲಾಲ್ ರಾಜಾರಾಮ್ ಬೂಲ್ ವಾಣಿಜ್ಯ ಮಹಾವಿದ್ಯಾಲಯದ ವಜ್ರಮಹೋತ್ಸವ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಸಚಿವರಾದ ಎನ್ ಎಸ್ ಬೋಸರಾಜು ಅವರು ಭಾಗವಹಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿದರು.

ಲಕ್ಷ್ಮೀ ವೆಂಕಟೇಶ ದೇಸಾಯಿ, ವೆಂಕಟಲಾಲ್ ಬೂಬ್ ಸೇರಿ ಅನೇಕ ಭೂ–ದಾನಿಗಳು ತನು–ಮನ ಧನ ಸಹಾಯದಿಂದ ಪ್ರಸ್ತುತ ದಿ. ನಾಗಪ್ಪ, ಹಾಗೂ ಅಧ್ಯಕ್ಷರಾದ ಪಾರಸಮಾಲ್ ಸುಖಾಣಿ ಅವರ ಅಧ್ಯಕ್ಷತೆಯಲ್ಲಿ ನಡೆಯುತ್ತಿರುವ ಸಂಸ್ಥೆಯಲ್ಲಿ ಪ್ರತಿ ವರ್ಷ 5000 ಮಕ್ಕಳು ಶಿಕ್ಷಣ ಪಡೆಯುತ್ತಿದ್ದಾರೆ. ಈ ಮಟ್ಟಕ್ಕೆ ಶಿಕ್ಷಣ ಸಂಸ್ಥೆ ಬೆಳೆಯಬೇಕಾದರೆ ದಾನಿಗಳ ಪಾತ್ರ ದೊಡ್ಡದು ಎಂದು ತಿಳಿಸಿದರು.

ತಾರಾನಾಥ ಶಿಕ್ಷಣ ಸಂಸ್ಥೆ ಪ್ರಾರಂಭದಿಂದಲು ಈ ಭಾಗದ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಜನರ ವಿಶ್ವಾಸ ಗಳಿಸಿದೆ. ಈ ಭಾಗದ ವಿದ್ಯಾರ್ಥಿಗಳು ಕಾನೂನು ಪದವಿ ಪಡೆಯಬೇಕಾದರೆ ದಾರವಾಡ, ಬೆಂಗಳೂರಿನಂತಹ ಮಹಾನಗರಗಳಿಗೆ ತೆರಳಬೇಕಾಗಿತ್ತು ಅಂತ ಸಂದರ್ಭದಲ್ಲಿ ಇಲ್ಲಿಯೇ ಕಾನೂನು ಮಹಾ ವಿದ್ಯಾಲಯ ಪ್ರಾರಂಭಿಸಿ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಿದ್ದಾರೆ. ಹಾಗಾಗಿ ಜಿಲ್ಲೆಯಲ್ಲಿ ಈ ತಾರಾನಾಥ ಶಿಕ್ಷಣ ಸಂಸ್ಥೆ ಹೆಸರುವಾಸಿಯಾಗಿದೆ. ಈ ಸಂಸ್ಥೆಯಲ್ಲಿ ಕಲಿತ ವಿದ್ಯಾರ್ಥಿಗಳು ದೊಡ್ಡ ದೊಡ್ಡ ಸರ್ಕಾರಿ ಹುದ್ದೆ ಹಾಗೂ ಖಾಸಗಿ ಕ್ಷೇತ್ರದಲ್ಲಿಯೂ ದೇಶದಾದ್ಯಂತ ಕೆಲಸ ಮಾಡುತ್ತಿದ್ದಾರೆ ಎಂದು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಕಾರ್ಯಕ್ರಮದ ಸಮಾರೋಪ ನುಡಿಕಾರರಾಗಿ ಆಗಮಿಸಿದ ಮಹರ್ಷಿ ವಾಲ್ಮೀಕಿ ವಿದ್ಯಾಲಯದ ಡಾ. ಎ ಚನ್ನಪ್ಪ, ತಾರಾನಾಥ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಪಾರಸ್ಮಾಲ್ ಸುಖಾಣಿ, ಕಾರ್ಯದರ್ಶಿ ಅಂಬಾಪತಿ ಪಾಟೀಲ್, ಪುರುಷೋತ್ತಮ, ಜಟ್ರಮ್ ಶ್ರೀನಿವಾಸ್, ಚೇತ ನ್ ದೋಖಾ, ಜಯಣ್ಣ, ಕೆ ಶಾಂತಪ್ಪ, ರುದ್ರಪ್ಪ ಅಂಗಡಿ ಇದ್ದರು.

## ರಾಜ್ಯಮಟ್ಟಕ್ಕೆ ವಿದ್ಯಾರ್ಥಿಗಳ ಆಯ್ಕೆ

ಯುವ ಮಾರ್ಗ ಸುದ್ದಿ

**ಕವಿತಾಳ ನ.15–**ವಿದ್ಯಾರ್ಥಿಗಳು ತಮ್ಮ ವಿದ್ಯಾಭ್ಯಾಸದ ಜೊತೆಯಲ್ಲಿ ಕ್ರೀಡೆಗಳಿಗೂ ಮಹತ್ವ ನೀಡಿದರೆ ತಮ್ಮ ಸಾಧನೆಗಳು ಅನಾವರಣಗೊಳ್ಳುತ್ತೇವೆ, ದೈಹಿಕ ಹಾಗೂ ಮಾನಸಿಕ ಆರೋಗ್ಯಕ್ಕೆ ಕ್ರೀಡೆಗಳು ಸಹಕಾರಿಯಾಗಿವೆ, ನಮ್ಮ ಶಾಲೆಯ ವಿದ್ಯಾರ್ಥಿಗಳ ಸಾಧನೆ ಅಪಾರವಾಗಿದೆ ಎಂದು ಫಾದರ್ ಆನಂದ ಪ್ರಸಾದ್ ಹೇಳಿದರು.

ಅವರು ಶನಿವಾರ ನವಚೇತನ ಶಾಲೆಯ ಆವರಣದಲ್ಲಿ ವಿದ್ಯಾರ್ಥಿಗಳ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿ ಮಾತನಾಡಿದರು.

ಎಲ್ಲಾ ಶಾಲೆಯ ವಿದ್ಯಾರ್ಥಿಗಳು ಕ್ರೀಡೆಗಳಲ್ಲಿ ಭಾಹವಹಿಸಬೇಕು, ಸೋಲು–ಗೇಲುವು ಮುಖ್ಯವಲ್ಲ ಪ್ರಯತ್ನ ಮುಖ್ಯ, ಪ್ರಯತ್ನಕ್ಕೆ ಫಲವಿದೆ, ಆದ್ದರಿಂದ ದೈಹಿಕ ಶಿಕ್ಷಕರು ಕ್ರೀಡಾ ವಿಭಾಗದಲ್ಲಿ ವಿದ್ಯಾರ್ಥಿಗಳ ಪ್ರತಿಭೆಗಳನ್ನು ಗುರುತಿಸಿ ಅವರನ್ನು ಮುಂಚೂಣಿಗೆ ತರಬೇಕೆಂದು ಹೇಳಿದರು.

ಸಾಧಕರು–ಬಾಲಕರ ವಿಭಾಗದ 100ಇ. ಓಟದಲ್ಲಿ ಹಾಗೂ ಚಕ್ರ ಎಸೆತದಲ್ಲಿ ದುರಗೇಶ ಪ್ರಥಮ, ಚಕ್ರ ಎಸೆತದಲ್ಲಿ ಹರೀಶ್ ಪ್ರಥಮ, 1500, 3000 ಮೀ. ಓಟದಲ್ಲಿ ಚನ್ನಕೇಶವ ದ್ವಿತೀಯ ಸ್ಥಾನ ಪಡೆದರೆ ಬಾಲಕಿಯರ ವಿಭಾಗದಲ್ಲಿ ಎತ್ತರ ಜಿಗಿತದಲ್ಲಿ ಸೌಮ್ಯ ಪ್ರಥಮ, 1500ಮೀ.ಓಟದಲ್ಲಿ ಲಕ್ಷ್ಮೀ ಪ್ರಥಮ, ಚಕ್ರ



ಎಸೆತದಲ್ಲಿ ಶ್ರೀದೇವಿ ಪ್ರಥಮ ಸ್ಥಾನ ಪಡೆದು ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ನವಚೇತನ ಶಾಲೆಯ ಆಡಳಿತ ಮಂಡಳಿ ಹಾಗೂ ಶಿಕ್ಷಕ ವೃಂದ, ಪಟ್ಟಣದ ಕ್ರೀಡಾಭಿಮಾನಿಗಳು ಹರ್ಷ ವ್ಯಕ್ತಪಡಿಸಿದ್ದಾರೆ.

## ಬಿಹಾರ ಫಲಿತಾಂಶ ಕರ್ನಾಟಕದಲ್ಲಿ ಮರುಕಳಿಸಲಿದೆ : ಹೆಚ್.ಡಿ.ಕುಮಾರಸ್ವಾಮಿ



**ನವದೆಹಲಿ, ನ.15–** ಬಿಹಾರ ದಲ್ಲಿ ಎನ್‌ಡಿಎ ಪರ ಬಂದಿರುವ ಈ ಐತಿಹಾಸಿಕ ವಿಜಯ ಮುಂಬರುವ ಕರ್ನಾಟಕದ ವಿಧಾನಸಭಾ ಚುನಾವಣೆ ಮೇಲೆಯೂ ಗಾಢ ಪ್ರಭಾವ ಬೀರಲಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಮಂತ್ರಿ ಹೆಚ್.ಡಿ.ಕುಮಾರ ಸ್ವಾಮಿ ಅವರು ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ಜೆಡಿಎಸ್–ಬಿಜೆಪಿ ಮೈತ್ರಿಕೂಟ ಮುಂದಿನ ಚುನಾವಣೆಯಲ್ಲಿ ಉತ್ತಮ ಬಹುಮತದೊಂದಿಗೆ ಸರ್ಕಾರ ಮಾಡುವುದು ಶತಃಸಿದ್ಧ ಎಂದು ಹೇಳಿದ್ದಾರೆ.

ಈಗಾಗಲೇ ರಾಜ್ಯ ಕಾಂಗ್ರೆಸ್ ಸರ್ಕಾರ ಆಡಳಿತ ವಿರೋಧಿ ಅಲೆಯಿಂದ ನರಳುತ್ತಿದೆ. ಕಳೆದ ಎರಡೂವರೆ ವರ್ಷದಿಂದ ನಾಯಕತ್ವ ಬದಲಿಸುವುದರಲ್ಲೇ ಕಾಂಗ್ರೆಸ್ ಕಾಲಹರಣ ಮಾಡಿದೆ. ಜನರು ಭ್ರಮನಿರಸಗೊಂಡಿದ್ದು, ಬಹಳ ನಿರೀಕ್ಷೆ ಇಟ್ಟುಕೊಂಡು 136 ಸ್ಥಾನ ಕೊಟ್ಟಿದ್ದಕ್ಕೆ ನಿರಾಶರಾಗಿದ್ದಾರೆ. ರಾಜ್ಯದ ಜನರು ಯಾವಾಗ ಚುನಾವಣೆ ಬರುತ್ತದೋ ಎಂದು ನೋಡುತ್ತಿದ್ದಾರೆ. ಕಾಂಗ್ರೆಸ್ಸಿಗೆ ಪಾಠ ಕಲಿಸಲು ಮಾನಸಿಕವಾಗಿ ಸಿದ್ಧವಾಗಿದ್ದಾರೆ ಎಂದು ಅವರು ತಿಳಿಸಿದ್ದಾರೆ.ರಾಜ್ಯದಲ್ಲಿ ಎನ್‌ಡಿಎ ಮೈತ್ರಿಕೂಟ ಬಲಿಷ್ಠವಾಗಿದೆ. ಬಿಜೆಪಿ– ಜೆಡಿಎಸ್ ನಾಯಕರೆಲ್ಲರೂ ಒಂದೇ ವೇದಿಕೆಯಲ್ಲಿ ಹೋಗುತ್ತಿದ್ದೇವೆ. ಬಿಹಾರದಂತೆಯೇ ಕರ್ನಾಟಕದಲ್ಲಿಯೂ ದಾಖಲೆಯ ಫಲಿತಾಂಶ ಪಡೆಯಲು ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಕೆಲಸ ಮಾಡುತ್ತೇವೆ. ಬಿಹಾರದ ದಾಖಲೆಯನ್ನು ಮುರಿಯುವ ರೀತಿಯಲ್ಲಿ ಕೆಲಸ ಮಾಡುತ್ತೆ?ವೆ ಎಂದು ಕೇಂದ್ರ ಸಚಿವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ವೋಟ್ ಚೋರಿ ಎನ್ನುವ ಸುಳ್ಳು ಸಂಕಥನ ಸೃಷ್ಟಿಸಿದ್ದ ಕಾಂಗ್ರೆಸ್ ಪಕ್ಷಕ್ಕೆ ಬಿಹಾರ ಮತದಾರರು ತಕ್ಕಪಾಠ ಕಲಿಸಿದ್ದಾರೆ. ಕಾಂಗ್ರೆಸ್ ಪ್ರಜಾಪ್ರಭುತ್ವ ವ್ಯವಸ್ಥೆಯ ಮೇಲೆ ನಂಬಿಕೆ ಕಳೆದುಕೊಂಡು ಸುಳ್ಳಿನ ಕಥೆಗಳನ್ನೆ ಸೃಷ್ಟಿಸಿ ಅಪಪ್ರಚಾರ ನಡೆಸಿತು. ಬಿಹಾರದ ಪ್ರಬುದ್ಧ ಮತದಾರರು ಇದಕ್ಕೆ ತಕ್ಕ ಪ್ರತಿಕ್ರಿಯೆ ನೀಡಿ ಆ ಪಕ್ಷಕ್ಕೆ ಕಪಾಳಮೋಕ್ಷ ಮಾಡಿದ್ದಾರೆಂದು ಹೇಳಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ಅಭಿವೃದ್ಧಿಪರ ಆಡಳಿತ ಹಾಗೂ 2047ಕ್ಕೆ ವಿಕಸಿತ ಭಾರತ ಸಾಕಾರ ಆಗಬೇಕೆನ್ನುವ ಅವರ ದೃಢ ಸಂಕಲ್ಪಕ್ಕೆ ಬಿಹಾರದ ಜನತೆ ಅಭೂತಪೂರ್ವ ಬೆಂಬಲ ನೀಡಿದ್ದಾರೆ. ಇದಕ್ಕಾಗಿ ನಾನು ಅಲ್ಲಿನ ಜನರನ್ನು ಅಭಿನಂದಿಸುತ್ತೆ?ನೆ ಎಂದಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಬಲಿಷ್ಠ ಎನ್‌ಡಿಎ ಮೈತ್ರಿಕೂಟವು ಸ್ವಾತಂತ್ರ್ಯೋತ್ತರ ಭಾರತದಲ್ಲಿಯೇ ಹಿಂದೆಂದೂ ಕಂಡಿರದ ದಾಖಲೆ ವಿಜಯವನ್ನು ಸಾಧಿಸಿದೆ.ಮೋದಿ ಅವರೊಂ ದಿಗೆ ಮೈತ್ರಿಕೂಟದ ಜಯಕ್ಕಾಗಿ ಅವಿರತವಾಗಿ ದುಡಿಮೆ ಮಾಡಿದ ಬಿಹಾರದ ಮುಖ್ಯಮಂತ್ರಿ ನಿತೀಶ್ ಕುಮಾರ್, ಗೃಹ ಸಚಿವರಾದ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾದ ಜೆ.ಪಿ. ನಡ್ಡಾ, ಕೇಂ ದ್ರ ಸಚಿವರಾದ ಚಿರಾಗ್ ಪಾಸ್ವಾನ್ ಹಾಗೂ ಜಿತಿನ್ ರಾಮ್ ಮಾಂಜಿ ಅವರನ್ನು ನಾನು ಅಭಿನಂದಿಸುತ್ತೇನೆ ಎಂದು ಅವರು ತಿಳಿಸಿದ್ದಾರೆ.

ಮತ ಚೋರಿ ಭಜನೆಯನ್ನು ನಿಲ್ಲಿಸಿ ಎಂದು ಬಿಹಾರದ ಜನ ಕಾಂಗ್ರೆಸ್ಸಿಗೆ ಹೇಳಿದ್ದಾರೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ಇವರು 136 ಸೀಟು ಗೆಲ್ಲುತ್ತೇವೆ ಎಂದು ಹೇಳಿದ್ದರು. ಅಷ್ಟು ಕರಾರುವಾಕ್ಕಾಗಿ ಹೇಳಲು ಇವರೇನು ತ್ರಿಕಾಲ ಜ್ಞಾನಿಗಳಾ? ಇವರೇನು ಚುನಾವಣಾ ಆಯೋಗದ ಸಹಾಯ ಪಡೆದು ಗೆದ್ದಿದ್ದರಾ? ಫಲಿತಾಂಶ ಬರುವುದಕ್ಕೆ ಮೊದಲು ಕೆಪಿಸಿಸಿ ಅಧ್ಯಕ್ಷರು ಹೇಳಿದ್ದರಲ್ಲಾ, ಅದರ ಅರ್ಥವೇನು ಇನ್ನಾದರೂ ಕಾಂಗ್ರೆಸ್ ನಾಯಕರು ದುರಹಂಕರದ ಮಾತುಗಳನ್ನು ನಿಲ್ಲಿಸುವುದು ಒಳ್ಳೆಯದು ಎಂದು ಕುಮಾರಸ್ವಾಮಿ ಅವರು ಹೇಳಿದ್ದಾರೆ.

## ಗ್ರಾಮೀಣ ಭಾಗದ ವಿಧ್ಯಾರ್ಥಿಗಳಿಗೆ ಸಮಯಕ್ಕೆ ಸರಿಯಾಗಿ ಬಸ್ ಸಂಚಾರ ಕೈಗೊಳ್ಳಿ:ಪ್ರಶಾಂತ

ಯುವ ಮಾರ್ಗ ಸುದ್ದಿ



**ಮಾನ್ವಿ,ನ.15–** ಮಾನ್ವಿ ಮತ್ತು ಸಿರವಾರ ತಾಲೂಕುಗಳ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಮಾನ್ವಿ ಪಟ್ಟಣದಲ್ಲಿನ ವಿವಿಧ ಕಾಲೇಜು ಮತ್ತು ಶಾಲೆಗಳಲ್ಲಿ ಅಭ್ಯಾಸ ಮಾಡುವುದಕ್ಕೆ ನಿತ್ಯ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಸಂಚಾರ ಮಾಡುತ್ತಿದ್ದು ವಿದ್ಯಾರ್ಥಿಗಳ ಶಾಲೆಗಳಿಗೆ ಹೋಗುವುದಕ್ಕೆ ಸರಿಯಾಗಿ ಬಸ್ ಸಂಚಾರ ವ್ಯವಸ್ಥೆ ಕಲ್ಪಿಸುವಂತೆ ಭೀಮಸೇನೆ ವಿದ್ಯಾರ್ಥಿ ಘಟಕದ ರಾಜ್ಯ ಪ್ರ.ಕಾರ್ಯದರ್ಶಿ ಪ್ರಶಾಂತ ಜಾಗೀರ್ ಪನ್ನೂರು ಒತ್ತಾಯಿಸಿದರು.

ಪಟ್ಟಣದ ಕಲ್ಯಾಣ ಕರ್ನಾಟಕ ಸಾರಿಗೆ ಘಟಕದಲ್ಲಿ ಭೀಮಸೇನೆ ವಿದ್ಯಾರ್ಥಿ ಘಟಕದಿಂದ ಸಾರಿಗೆ ವ್ಯವಸ್ಥಾಪಕರಿಗೆ ರವರು ಮನವಿ ಸಲ್ಲಿಸಿ ಮಾತನಾಡಿ ಕರಡಿಗುಡ್ಡ, ಕೆ.ಗುಡದಿನ್ನಿ,ಜಂಬಲದಿನ್ನಿ, ಚಾಗಬಾವಿ ,ಜಾಗೀರ್ ಪನ್ನೂರು ಗ್ರಾಮಗಳಿಂದ ಮಾನ್ವಿಗೆ ಬೆಳಿಗ್ಗೆ 6ಕ್ಕೆ ಸರಿಯಾದ ಸಮಯಕ್ಕೆ ವಿದ್ಯಾರ್ಥಿಗಳಿಗಾಗಿ ಬಸ್ ಸಾಂಚರ ವ್ಯವಸ್ಥೆ ಕಲ್ಪಿಸಬೇಕು ಹಾಗೂ ಸಂಜೆ ವಿದ್ಯಾರ್ಥಿಗಳು ತಮ್ಮ ಗ್ರಾಮಗಳಿಗೆ ಮರಳುವುದಕ್ಕೆ ಸರಿಯಾದ ವೇಳೆಗೆ ಬಸ್‌ಸಂಚಾರ ವ್ಯವಸ್ಥೆಯನ್ನು ಕಲ್ಪಿಸುವ ಮೂಲಕ ವಿದ್ಯಾಥಿ ್ಗಳಿಗೆ ಅನುಕೂಲ ಮಾಡಿಕೊಡಬೇಕು ಎಂದು ಒತ್ತಾಯಿಸಿದರು.

ಕರವೇ ಹೆಚ್.ಶಿವರಾಮೇಗೌಡ ಬಣದಿಂದ ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ಕನ್ನಡ ಪ್ರಬಂಧ ಸ್ಪರ್ಧೆ

## ಆಸಕ್ತಿಯಿಂದ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿದ ಸರ್ಕಾರಿ ಶಾಲೆ ವಿದ್ಯಾರ್ಥಿಗಳು

ಯುವ ಮಾರ್ಗ ಸುದ್ದಿ



**ಮಾನ್ವಿ,ನ.15–** ಕರ್ನಾಟಕ ರಕ್ಷಣಾ ವೇದಿಕೆ ಹೆಚ್.ಶಿವರಾಮೇಗೌಡ ತಾಲೂಕ ಘಟಕ ವತಿಯಿಂದ 70ನೇ ಕನ್ನಡ ರಾಜ್ಯೋತ್ಸವ ಅಂಗವಾಗಿ ಸರ್ಕಾರಿ ಪ್ರೌಢಶಾಲೆ ಮಕ್ಕಳಿಗಾಗಿ 'ಕನ್ನಡ ನಾಡಹಬ್ಬ–ರಾಜ್ಯೋತ್ಸ ವದ ಅರ್ಥ ಮತ್ತು ಆಚರಣೆ' ವಿಷಯ ಕುರಿತು ಏರ್ಪಡಿಸಲಾಗಿದ್ದ ಕನ್ನಡ ಪ್ರಬಂಧ ಸ್ಪರ್ಧೆಯಲ್ಲಿ ಪ್ರೌಢಶಾಲೆ ಮಕ್ಕಳು ಆಸಕ್ತಿಯಿಂದ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಯಶಸ್ವಿಗೊಳಿಸಿದರು.

ಶನಿವಾರ ಬೆಳಿಗ್ಗೆ ಪಟ್ಟಣದ ಶ್ರೀ ಪಂಪಾವಿರೂಪಾಕ್ಷೇಶ್ವರ ಅನುದಾನಿತ ಪ್ರೌಢ ಶಾಲೆ ಕಲ್ಮಠದಲ್ಲಿ ನಡೆದ ಕನ್ನಡ ಪ್ರಬಂಧ ಸ್ಪರ್ಧೆಯಲ್ಲಿ ಸರ್ಕಾರಿ ಬಾಲಕರ ಪ್ರೌಢಶಾಲೆ, ಕೋನಾಪುರಪೇಟೆ ಪ್ರೌಢಶಾಲೆ, ಬಾಲಕಿಯರ ಪ್ರೌಢಶಾಲೆ ಹಾಗೂ ಅನುದಾನಿತ ಕಲ್ಮಠ ಪ್ರೌಢಶಾಲೆ ಸೇರಿದಂತೆ ಪ್ರತಿ ಶಾಲೆಯಿಂದ ತಲಾ ಐದು ಮಕ್ಕಳು ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸುವ ಮೂಲಕ ಕನ್ನಡ ನಾಡು, ನುಡಿ ಭಾಷಾ ಪ್ರಾಮುಖ್ಯತೆಯ ಕುರಿತು ಆಸಕ್ತಿಯನ್ನು ವ್ಯಕ್ತಪಡಿಸಿದರು.

ನಂತರ ಕರವೇ ಹೆಚ್.ಶಿವರಾಮೇಗೌಡ ಬಣದ ತಾಲೂಕ ಅಧ್ಯಕ್ಷ ನರಸಿಂಹ ಅವರು ಮಾತನಾಡಿ, ಶಾಲೆ ಮಕ್ಕಳಲ್ಲಿ ಕನ್ನಡ ಭಾಷಾ ಜ್ಞಾನದ ಜೊತೆಗೆ ಬರವಣಿ ಗೆಯ ಕುರಿತು ಆಸಕ್ತಿ ಹಾಗೂ ಪ್ರೋತ್ಸಾಹಿ ಸುವ ನಿಟ್ಟಿನಲ್ಲಿ ನಮ್ಮ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಆಯೋಜಿಸಲಾಗಿದ್ದ ಕನ್ನಡ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲಾ ವಿದ್ಯಾರ್ಥಿಗಳಿಗೆ ಸೂಕ್ತ ಬಹುಮಾನ ಹಾಗೂ ಪ್ರಶಂಸನೀಯ ಪ್ರಯತ್ನವನ್ನು ನೀಡಿ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸ ಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಕರವೇ ತಾಲೂಕ ಗೌರವಾಧ್ಯಕ್ಷ ಯಪ್ಪಲ್ಲ ನಿಲಾಗಲ್, ತಾ.ಪ್ರ. ಕಾರ್ಯದರ್ಶಿ ದೀಪಕ್ ಯಾದವ್, ನಗ ಘಟಕ ಅಧ್ಯಕ್ಷ ಮಹೇಂದ್ರ ನಾಯಕ, ಖಜಾಂಚಿ ವಿನಯ ಕುಮಾರ ವಿವಿಧ ಶಾಲೆಗಳ ಶಿಕ್ಷಕರಾದ ಸಂಜೀವಪ್ಪ ಚಲವಾದಿ, ಮಹಿಬೂಬ್ ಪಾಷ, ಶಿಕ್ಷಕಿ ಭ್ರಮರಾಂಭ, ಶ್ರೀಮತಿ ಕಟ್ಟಿ, ಫೈಮುದ್ದೀನ್ ಶರೀಫ್ ಉಪಸ್ಥಿತರಿದ್ದರು.



ರಾಯಚೂರು ಜಿಲ್ಲೆಯ ದೇವದಾಸಿಯರ ಸ್ಥಿತಿಗತಿ ಹಾಗೂ ಪುನರ್ವಸ್ಥಿತಿ ಕಾರ್ಯಕ್ರಮದಲ್ಲಿ ಶಿಕ್ಷಣ ಇಲಾಖೆಯಿಂದ ವಿದ್ಯಾರ್ಥಿಗಳಿಗೆ ಕೊಡಮಾಡುವ ಉಚಿತ ಯೋಚನೆಗಳ ಸ್ಟಾಲ್ ಹಾಕಲಾಯಿತು.

ಮಾನ್ಯ ಉಪ ನಿರ್ದೇಶಕರಾದ ಕೆ.ಡಿ ಬಡಿಗೇರ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಡಾ:ಈರಣ್ಣ ಕೋಸಗಿ, ಅಕ್ಷರ ದಾಸೋಹದ ಸಹಾಯಕ ನಿರ್ದೇಶಕರಾದ ಶ್ರೀನಿವಾಸ ಮರಡಿ, ಶಿಕ್ಷಣ ಸಂಯೋಜಕರಾದ ರಾಮಕೃಷ್ಣ ಕಟ್ಟಾವಲಿ ಉಪಸ್ಥಿತರಿದ್ದರು.

# ಮಕ್ಕಳ ಸರ್ವತೋಮುಖ ಬೆಳವಣಿಗೆಯಲ್ಲಿ ಪೋಷಕರ ಹಾಗೂ ಶಿಕ್ಷಕರ ಪಾತ್ರ ಬಹಳ ಪ್ರಮುಖ ಸ್ಥಾನ ಹೊಂದಿದೆ.– ಡಾಕ್ಟರ್ ಈರಣ್ಣ ಕೋಸಗಿ.




ಯುವ ಮಾರ್ಗ ಸುದ್ದಿ

**ರಾಯಚೂರು,ನ.15**–ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಬಿಜನಗೇರಾ ಈ ಶಾಲೆಯಲ್ಲಿ ಹಮ್ಮಿಕೊಂಡಿರುವ ಪೋಷಕ ಶಿಕ್ಷಕರ ಮಹಾ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಡಾಕ್ಟರ್ ವೀರಣ್ಣ ಕೋಸಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ರಾಯಚೂರು ಇವರು ಮಾತನಾಡುತ್ತಾ

ರಾಷ್ಟ್ರ ನಿರ್ಮಾಣ ಮತ್ತು ಚೈತನ್ಯಶೀಲ ಸಮಾಜ ನಿರ್ಮಾಣದ ಸಹಕಾರಕ್ಕಾಗಿ ಅರ್ಹ ವಯೋಮಾನದ ಎಲ್ಲಾ ಮಕ್ಕಳು ಶಾಲೆಗೆ ದಾಖಲಾಗಿ ನಿರಂತರವಾಗಿ ಹಾಜರಾಗಿ ಗುಣಮಟ್ಟದ ಶಿಕ್ಷಣ ಪಡೆಯುವುದು ಅಗತ್ಯವಾಗಿರುತ್ತದೆ .

ಎಲ್ಲಾ ಶೈಕ್ಷಣಿಕ ಉಪಕ್ರಮಗಳು ಅನುಷ್ಠಾನಗೊಳ್ಳಬೇಕಾದರೆ ಪಾಲಕರ ಹಾಗೂ ಶಿಕ್ಷಕರ ಸಮನ್ವಯ ಬಹಳ ಮುಖ್ಯವಾಗಿ ರುತ್ತದೆ, ಆದ್ದರಿಂದ ಸರ್ಕಾರ ಮತ್ತು ಶಿಕ್ಷಣ ಇಲಾಖೆ ಪೋಷಕ–ಶಿಕ್ಷಕ ಮಹಾಸಭೆಯನ್ನು ಆಯೋಜಿಸಿದೆ.

ಈ ಕಾರ್ಯಕ್ರಮದ ಪ್ರಮುಖ ಉದ್ದೇಶ ಸರ್ಕಾರದ ನೀಡಲಾಗುತ್ತಿರುವ ಪ್ರೋತ್ಸಾಹದಾಯಕ ಯೋಜನೆಗಳ ಬಗ್ಗೆ ಪೋಷಕರು ತಿಳಿದುಕೊಳ್ಳಬೇಕು. ಮಧ್ಯಾಹ್ನದ ಬಿಸಿ ಊಟ, ಉಚಿತ ಪಠ್ಯಪುಸ್ತಕ ಹಾಗೂ ಸಮವಸ್ತ್ರ ವಿತರಣೆ, ಮೊಟ್ಟೆ ಮತ್ತು ಬಾಳೆಹಣ್ಣು ಮಕ್ಕಳಿಗೆ ವಿತರಣೆಯಾಗುತ್ತಿದೆ ಎನ್ನುವುದನ್ನು ಗಮನಿಸಬೇಕು .ಮಕ್ಕಳ ಹಕ್ಕುಗಳು ಆರ್‌ಟಿಐ ಕಾಯ್ದೆ, ವಿಶೇಷ ಅಗತ್ಯವುಳ್ಳ ಮಕ್ಕಳ ಶಿಕ್ಷಣ, ಮಕ್ಕಳ ರಕ್ಷಣೆ ನೀತಿ ಮತ್ತು ಪೋಕ್ಸೋ ಕಾಯ್ದೆ ಬಗ್ಗೆ ಪ್ರತಿಯೊಬ್ಬರು ತಿಳಿದುಕೊಳ್ಳಬೇಕು .ಶಾಲೆಯಿಂದ ಗೈರಜರಾಗುವ ಹಾಗೂ ಬಾಲಕಾರ್ಮಿಕ ಬಾಲ್ಯ ವಿವಾಹಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಪೋಷಕರ ಜವಾಬ್ದಾರಿ ಪ್ರಮುಖವಾಗಿರುತ್ತದೆ ಎಂದ ಹೇಳಿದರು.

ವಿದ್ಯಾರ್ಥಿಗಳ ಗುಣಮಟ್ಟದ ಶಿಕ್ಷಣಕ್ಕೆ ಪೂರಕವಾಗಿ ಸರ್ಕಾರದಿಂದ ಅನುಷ್ಠಾನಗೊಳ್ಳುತ್ತಿರುವ ಉಪಕ್ರಮಗಳು ಪೋಷಕರು ಶಿಕ್ಷಕರು ಹಾಗೂ ಸ್ಥಳೀಯ ಜನಪ್ರತಿನಿಧಿಗಳ ಸಕ್ರಿಯ ಪಾಲ್ಗೊಳ್ಳುವಿಕೆಯಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗೆ ಪೂರಕವಾದ ವಾತಾವರಣ ನಿರ್ಮಿಸುವುದು ಪೋಷಕ ಶಿಕ್ಷಕ ಮಹಾಸಭೆಯ ಉದ್ದೇಶವಾಗಿದೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ನೂರಕ್ಕಿಂತ ಹೆಚ್ಚು ಪೋಷಕರು ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ಎಸ್ ಡಿ ಎಂ ಸಿ ಅಧ್ಯಕ್ಷ ರಹಿಂ , ಗ್ರಾಮ ಪಂಚಾಯತಿ ಉಪಾಧ್ಯಕ್ಷರಾದ ಸುಂದರ್ ರಾಜ್ ಶಾಲೆಯ ಮುಖ್ಯ ಗುರುಗಳಾದ ರಮೇಶ್ ರಾಥೋಡ್ ಶಿಕ್ಷಕ ಸಿಬ್ಬಂದಿ ಭಾಗವಹಿಸಿದ್ದರು. ಶಿಕ್ಷಣ ಸಂಯೋಜಕ ರಾಮಕೃಷ್ಣ ಕಟ್ಟಾವಲಿ ಪ್ರಾಸ್ತಾವಿಕವಾಗಿ ಮಾತನಾಡಿದರು..

# ಬಿಹಾರದಲ್ಲಿ ಸರ್ಕಾರದ ದುಡ್ಡಲ್ಲಿ ಮತ ಖರೀದಿಸಿ ಎನ್‌ಡಿಎ ಗೆದ್ದಿದೆ : ಗುಂಡೂರಾವ್ ಗಂಭೀರ ಆರೋಪ

**ಮಂಗಳೂರು, ನ.15**– ಬಿಹಾರ ವಿಧಾನಸಭೆ ಚುನಾವಣೆಯಲ್ಲಿ ಎನ್‌ಡಿಎ ಕೂಟ, ಸರ್ಕಾರದ ದುಡ್ಡಲ್ಲಿ ಮತ ಖರೀದಿಸಿ ಗೆದ್ದಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಗಂಭೀರ ಆರೋಪ ಮಾಡಿದ್ದಾರೆ.ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಚುನಾವಣಾ ಆಯೋಗ ಬಿಜೆಪಿ ಮತ್ತು ಅದರ ಮಿತ್ರ ಪಕ್ಷಗಳಿಗೆ ಅನುಕೂಲ ಮಾಡಿಕೊಡುವ ಎಲ್ಲ ಸಹಯೋಗವನ್ನು ನೀಡಿದೆ ಎಂದು ವಾಗ್ದಾಳಿ ನಡೆಸಿದರು.

ಚುನಾವಣೆ ಘೋಷಣೆಗೆ 4 ದಿನ ಬಾಕಿ ಇರುವಾಗ ಪ್ರತಿಯೊಬ್ಬ ಮಹಿಳೆಯರ ಖಾತೆಗೆ ತಲಾ 10 ಸಾವಿರ ರೂ. ಹಾಕಲಾಗಿದೆ. ಸರ್ಕಾರ ದುಡ್ಡಿನಲ್ಲಿ ಮತ ಖರೀದಿಗೆ ಚುನಾವಣಾ ಆಯೋಗವೇ ಅವಕಾಶ ಮಾಡಿಕೊಟ್ಟಿತ್ತು ಎಂದು ಟೀಕಿಸಿದರು. ಬೇರೆ ಬೇರೆ ರಾಜ್ಯಗಳು ಚುನಾವಣೆ ಸಂದರ್ಭದಲ್ಲಿ ಇದನ್ನೆ ಶುರು ಮಾಡಬಹುದು. ಚುನಾವಣೆ ಹತ್ತಿರವಿದ್ದಾಗ ಯಾವುದೋ ಒಂದು ಯೋಜನೆಯನ್ನು ಘೋಷಣೆ ಮಾಡಿ, 10,20,30 ಸಾವಿರದಂತೆ ಹಣ ಹಾಕಬಹುದು ಹಾಗೆ ಮಾಡಿದರೆ ನ್ಯಾಯಯುತ ಚುನಾವಣೆ ಹೇಗಾಗುತ್ತದೆ ಎಂದು ಪ್ರಶ್ನಿಸಿದರು.

ಬಿಹಾರದ ಜಿಡಿಪಿಯ ಶೇ.2.7ರಷ್ಟು ಹಣವನ್ನು ಚುನಾವಣೆಗೆ ಮೊದಲೇ ಮತದಾರರ ಖಾತೆಗೆ ಹಾಕಲಾಗಿತ್ತು. ಆಯೋಗ ಇದನ್ನು ಏಕೆ? ಪ್ರಶ್ನಿಸಿಲ್ಲ. ಯಾವುದೇ ಆದಾರವಿಲ್ಲದೆ ಹಾಗೂ ಸೂಚನೆಯೂ ಇಲ್ಲದ ಯೋಜನೆಯಡಿ ಹಣ ಪಾವತಿಸಲಾಗಿದೆ. ಇದಕ್ಕಾಗಿ ಚುನಾವಣಾ ದಿನಾಂಕವನ್ನು ಹೊಂದಾಣಿಕೆ ಮಾಡಿಕೊಳ್ಳಲಾಗಿತ್ತು. ಜನರ ದುಡ್ಡಿನಲ್ಲಿ ರಾಜಕೀಯ ಪಕ್ಷ ಮತ ಖರೀದಿ ಮಾಡಿದರೆ, ಇದನ್ನು ಯಾವ ರೀತಿಯ ನೈತಿಕತೆಯೆಂದು ಹೇಳಲು ಸಾಧ್ಯ ಎಂದರು.

75 ಲಕ್ಷ ಕುಟುಂಬಗಳಿಗೆ ತಲಾ 10 ಸಾವಿರದಂತೆ ಹಣ ಹಾಕಲಾಗಿದೆ. ಬಿಹಾರದಲ್ಲಿ ಮುಖ್ಯಮಂತ್ರಿ ನಿತೀಶ್‌ಕುಮಾರ್ ಅವರ ವರ್ಚಸ್ಸು ಇದೆ. ಅದರೆ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಎಲ್ಲಾ ರೀತಿಯ ಅಸ್ತ್ರಗಳನ್ನು ಬಳಕೆ ಮಾಡಿಕೊಂಡಿದೆ. ಸೋಲಿಗೆ ನಮ ವೈಫಲ್ಯವೂ ಕಾರಣ. ನಮ ತಪ್ಪುಗಳ ಬಗ್ಗೆಯೂ ನಾವು ಮಾತನಾಡಬೇಕಿದೆ. ಮಹಾ ಘಟಬಂಧನ್‌ನಲ್ಲಿ ಸ್ಥಾನ ಹಂಚಿಕೆ ಬಗ್ಗೆ ಕೊನೆ ಹಂತದವರೆಗೂ ಗೊಂದಲಗಳಿತ್ತು. ಮುಖ್ಯಮಂತ್ರಿ ಆಯ್ಕೆ ವಿಷಯದಲ್ಲೂ ಸೂಕ್ತ ಸಮಯದಲ್ಲಿ ನಿರ್ಧಾರ ತೆಗೆದುಕೊಳ್ಳಲಿಲ್ಲ ಎಂದು ಹೇಳಿದರು.ಉದ್ಯೋಗ ಅರಿಸಿ ಬೇರೆ ರಾಜ್ಯಗಳಿಗೂ ಹೋಗಿರುವವರನ್ನು ಮತದದಾನಕ್ಕೆ ವಾಪಸ್ ಕರೆಸಲು ವಿಶೇಷ ರೈಲು ಸೇರಿದಂತೆ ಹಲವು ಸೌಲಭ್ಯಗಳನ್ನು ಒದಗಿಸಲಾಗಿತ್ತು ಎಂದು ಹೇಳಿದರು.

ಉತ್ತರ ಭಾರತದಲ್ಲಿ ಹಿಂದುತ್ವದ ಆಧಾರದಲ್ಲಿ ಮತಗಳ ವಿಭಜನೆಯಾಗುತ್ತದೆ. ಆದರೆ ದಕ್ಷಿಣ ಭಾರತದಲ್ಲಿ ಇದಕ್ಕೆ ಅವಕಾಶವಿಲ್ಲ. ಆದರೆ ಬಿಜೆಪಿ ಹೆಚ್ಚು ಮತಗಳನ್ನು ಪಡೆದಿದೆ. ಹಾಗಾಗಿ ಬಿಹಾರದಲ್ಲಿ ಗೆಲ್ಲಲು ಸಾಧ್ಯವಾಗಿದೆ ಎಂದು ಹೇಳಿದರು.ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ದೆಹಲಿಗೆ ಭೇಟಿ ನೀಡಿರುವುದು ಪೂರ್ವ ನಿಯೋಜಿತ. ನವೆಂಬರ್ ಕ್ರಾಂತಿಗೂ ಬಿಹಾರದ ಚುನಾವಣೆಗೂ ಯಾವುದೇ ಸಂಬಂಧವಿಲ್ಲ. ರಾಜಕೀಯ ಕ್ರಾಂತಿಯೇ ಆದಾರರಹಿತ ವದ್ದಂತಿ ಎಂದು ಹೇಳಿದರು.

# ಮತಗಳ್ಳತನ ಆರೋಪ ತಿರಸ್ಕರಿಸಿದ ಜನತೆ– ಸುಭಾಷ್ ಆರ್ ಗುತ್ತೇದಾರ

**ಆಳಂದ,ನ.15**–ದೇಶದಲ್ಲಿ ವಿಪಕ್ಷ ನಾಯಕ ರಾಹುಲ ಗಾಂಧಿ ಮಾಡುತ್ತಿರುವ ಮತಗಳ್ಳತನ ಆರೋಪವನ್ನು ಜನತೆ ಸಾರಾಸಾಗಾಟಾಗಿ ತಿರಸ್ಕಾರ ಮಾಡಿದ್ದಾರೆ ಎಂದು ಆಳಂದ ಮಾಜಿ ಶಾಸಕ ಸುಭಾಷ್ ಆರ್ ಗುತ್ತೇದಾರ ತಿಳಿಸಿದ್ದಾರೆ.



ಬಿಹಾರ ಚುನಾವಣೆ ಫಲಿತಾಂಶ ಕುರಿತು ಪ್ರತಿಕ್ರಿಯೆ ನೀಡಿದ ಅವರು, ಬಿಹಾರ ಫಲಿತಾಂಶವು ಆಶಾದಾಯಕವಾಗಿದ್ದು ಬಿಹಾರದಲ್ಲಿ ಪಕ್ಷದ ನೆಲೆ ಮತ್ತಷ್ಟು ವಿಸ್ತಾರಗೊಂಡಿದೆ. ಈ ಫಲಿತಾಂಶವು ಬಿಜೆಪಿಯ ಶಕ್ತಿಯನ್ನು ಮತ್ತಷ್ಟು ವೃದ್ಧಿಸಿದೆ. ದೇಶದ ಮತ್ತು ಬಿಹಾರ ರಾಜ್ಯದ ಜನತೆ ಭಾರತೀಯ ಜನತಾ ಪಕ್ಷ ಹಾಗೂ ಎನ್‌ಡಿಎ ಜೊತೆ ಇದ್ದಾರೆ ಎನ್ನುವುದು ಮತ್ತೊಮ್ಮೆ ಸಾಬಿತಾಗಿದೆ. ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ನಿತೀಶಕುಮಾರ ಸಮರ್ಥ ನಾಯಕತ್ವಕ್ಕೆ ಸಿಕ್ಕ ಮನ್ನಣೆಯಾಗಿದೆ ಅಭಿಪ್ರಾಯಪಟ್ಟಿದ್ದಾರೆ.

ಮತಗಳ್ಳತನ ಎನ್ನುವುದು ಜನರ ಗಮನವನ್ನು ಬೇರೆಡೆ ಸೆಳೆಯಲು ಕಾಂಗ್ರೆಸ್ ಹೂಡಿರುವ ಕುತಂತ್ರದ ಷಡ್ಯಂತ್ರವಾಗಿದೆ. ಕರ್ನಾಟಕ ರಾಜ್ಯದಲ್ಲಿ ಅವರದೇ ಪಕ್ಷದ ಸರ್ಕಾರ ಇರುವುದರಿಂದ ಅಧಿಕಾರ ದುರುಪಯೋ ಗಪಡಿಸಿಕೊಂಡು ಎಸ್‌ಐಟಿ ರಚನೆ ಮಾಡಿ ತನಿಖೆ ಮಾಡುತ್ತಿದ್ದಾರೆ ಇದರಿಂದ ಯಾವುದೇ ರೀತಿಯ ಪ್ರಯೋಜ ನವಾಗಲ್ಲ ಎಂದು ಹೇಳಿದ್ದಾರೆ.

# ಹಳ್ಳಿಸಲಗರ ಗ್ರಾಮ ಪಂಚಾಯತ ಗ್ರಾಮಸಭೆ

**ಆಳಂದ,ನ.15**–ದೈನಂದಿನ ಕಾರ್ಯಗಳೊಂದಿಗೆ ಪಶುಸಂಗೋಪನೆಯನ್ನು ಅಳವಡಿಸಿಕೊಂಡರೆ ಜೀವನ ನಡೆಸುವುದು ಮತ್ತಷ್ಟು ಸುಲಭವಾಗಲಿದೆ ಎಂದು ಆಳಂದ ಪಶುಸಂಗೋಪನಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಯಲ್ಲಪ್ಪ ಇಂಗಳೆ ಅಭಿಪ್ರಾಯಪಟ್ಟರು.

ಶುಕ್ರವಾರ ಆಳಂದ ತಾಲೂಕಿನ ಹಳ್ಳಿಸಲಗರ ಗ್ರಾಮದ ಗ್ರಾಮ ಪಂಚಾಯತಿಯಲ್ಲಿ ಹಮ್ಮಿಕೊಂಡಿದ್ದ ಗ್ರಾಮಸಭೆಯಲ್ಲಿ ನೋಡಲ್ ಅಧಿಕಾರಿಯಾಗಿ ಭಾಗವಹಿಸಿ ಮಾತನಾಡಿದ ಅವರು, ಶ್ರಮಿಕ ವರ್ಗದ ರೈತರು ತಮ್ಮ ಕುಟುಂಬ ನಿರ್ವಹಣೆಗಾಗಿ ಕೋಳಿ ಸಾಕಾಣಿಕೆ, ಕುರಿ ಸಾಕಾಣಿಕೆ ಹಾಗೂ ಹೈನುಗಾರಿಕೆ ಮಾಡಿಕೊಳ್ಳುವುದು ಅವಶ್ಯಕವಾಗಿದೆ ಎಂದರು.

ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಲ್ಲಿ ದನಗಳ ಕೊಟ್ಟಿಗೆ, ಕೋಳಿ ಶೆಡ್ಡು, ಕುರಿ ದೊಡ್ಡಿ ನಿರ್ಮಿಸಿಕೊಳ್ಳಲು ಅವಕಾಶವಿದೆ ಅದಕ್ಕಾಗಿ ಸಹಾಯಧನವನ್ನು ಮಂಜೂರು ಮಾಡಲಾಗುವುದು. ಮನೆಯಲ್ಲಿ ಹೈನುಗಾರಿಕೆ ಇದ್ದರೆ ಮಕ್ಕಳಿಗೆ ಹಾಲು, ತುಪ್ಪ, ಬೆಣ್ಣೆ ಸಿಗುತ್ತದೆ ಇದರಿಂದ ಮಕ್ಕಳು ದಷ್ಟ ಪುಷ್ಟವಾಗಿ ಬೆಳೆಯುತ್ತಾರೆ ಅಲ್ಲದೇ ಕುಟುಂಬ




ಸದಸ್ಯರು ಆರೋಗ್ಯಯುತವಾಗಿ ಇರಬಹುದು ಎಂದು ಹೇಳಿದರು.ಗ್ರಾಮ ಪಂಚಾಯತ ಗ್ರೇಡ್–1 ಕಾರ್ಯದರ್ಶಿ ಗೋವಿಂದ ಮಾತನಾಡಿ, ಉದ್ಯೋಗ ಖಾತರಿ ಯೋಜನೆಯ ಕಾರ್ಮಿಕ ಆಯವ್ಯಯ ತಯಾರಿಸುವ ಕುರಿತು ಸರ್ಕಾರದ ಮಾರ್ಗಸೂಚಿಗಳನ್ನು ಓದಿ ಹೇಳಿದರು.

ಸಭೆಯಲ್ಲಿ ಬಾಲ್ಯವಿವಾಹ, ಶಾಲೆ ಬಿಟ್ಟ ಮಕ್ಕಳ ಬಗ್ಗೆ, ಮಹಿಳಾ ಮತ್ತು ಮಕ್ಕಳ ಹಕ್ಕುಗಳ ರಕ್ಷಣೆ ಕುರಿತು ಚರ್ಚಿಸಲಾಯಿತು. ಗ್ರಾಮದಲ್ಲಿ ಕೈಗೊಳ್ಳಬೇಕಾದ ಅನೇಕ ಅಭಿವೃದ್ಧಿ ಕಾರ್ಯಗಳ ಕುರಿತು ಅನುಮೋದನೆ ನೀಡಲಾಯಿತು.

# ವಿದ್ಯಾರ್ಥಿ ಜೀವನ ಅತ್ಯಮೂಲ್ಯವಾಗಿದೆ : ಸಿದ್ದನಗೌಡ ಪಾಟೀಲ್



ಯುವ ಮಾರ್ಗ ಸುದ್ದಿ

**ಮಾನ್ವಿ,ನ.15**– ವಿದ್ಯಾರ್ಥಿ ಜೀವನ ಅತ್ಯಮೂಲ್ಯವಾಗಿದ್ದು ಈ ಸಮಯವನ್ನು ವ್ಯರ್ಥಮಾಡಿಕೊಳ್ಳದೆ ಉಪನ್ಯಾಸಕರು ನೀಡಿದ ಮಾರ್ಗದರ್ಶನವನ್ನು ಪಡೆದುಕೊಂಡು ತಮ್ಮ ಮುಂದಿನ ಜೀವನವನ್ನು ಹಾಗೂ ಭವಿಷ್ಯವನ್ನು ಚೆನ್ನಾಗಿ ರೂಪಿಸಿಕೊಳ್ಳಿ ಎಂದು ಕಲ್ಮಠ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಸಿದ್ದನಗೌಡ ಪಾಟೀಲ್ ತಿಳಿಸಿದರು.

ಪಟ್ಟಣದ ಹಠಯೋಗಿ ಅವಧೂತ ಅನ್ನಮಯ್ಯತಾತ ದೇವಸ್ಥಾನದ ಆವರಣದಲ್ಲಿ ಕಲ್ಮಠ ಪದವಿ ಮಹಾವಿದ್ಯಾಲಯದ ರಾಷ್ಟ್ರೀಯ ಯೋಜನೆ ಘಟಕದ ವತಿಯಿಂದ ಹಮ್ಮಿಕೊಂಡ ಪರಿಸರ ವಿಕ್ಷೇಣೆ ಕಾರ್ಯಕ್ರಮದಲ್ಲಿ ಮಾತನಾಡಿ ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಪ್ರತಿನಿತ್ಯ ಹೊಸ,ಹೊಸ ವಿಷಯಗಳ ಬಗ್ಗೆ ತಿಳಿದುಕೊಳ್ಳುವುದಕ್ಕೆ ಪ್ರಯತ್ನಿಸಿದಾಗ ಮಾತ್ರ ಉತ್ತಮವಾದ ಜ್ಞಾನವನ್ನು ಪಡೆದುಕೊಳ್ಳುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕಾಲೇಜಿನ ಕನ್ನಡ ಉಪನ್ಯಾಸಕರಾದ ದೇವೇಂದ್ರಪ್ಪ ಪುಲದಿನ್ನಿ ಮಾತನಾಡಿದರು.

ವಿವಿಧ ಚಟುವಟಿಕೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಕಾಲೇಜಿನ ಉಪನ್ಯಾಸಕರಾದ ವಿರುಪಣ್ಣ ಪಾಟೀಲ್, ರಾಘವೇಂದ್ರ, ಆನಂದ ,ಹುಸೇನ್, ಶರಣಮ್ಮ, ಲಕ್ಷ್ಮೀ ಸೇರಿದಂತೆ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿದರು.

# ಖಾಸಗಿ ಶಾಲೆ ಮಾನ್ಯತೆ ನವೀಕರಣ ಸರಳೀಕರಣ: ಭರವಸೆ

**ಬೀದರ್,ನ.15**– ಕನ್ನಡ ಮಾಧ್ಯಮ ಖಾಸಗಿ ಶಾಲೆಗಳ ಮಾನ್ಯತೆ ನವೀಕರಣ ಸರಳೀಕರಿಸಲಾಗುವುದು ಎಂದು ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಶ್ಮಿ ವಿ. ಮಹೇಶ್ ಹೇಳಿದರು.

ಅಖಿಲ ಕರ್ನಾಟಕ ಅನುದಾನ ರಹಿತ ಖಾಸಗಿ ಶಿಕ್ಷಣ ಸಂಸ್ಥೆಗಳ ಸಂಘದ ರಾಜ್ಯ ಅಧ್ಯಕ್ಷ ರೇವಣಸಿದ್ದಪ್ಪ ಜಲಾದೆ ಅವರ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ಶನಿವಾರ ತಮ್ಮನ್ನು ಭೇಟಿಯಾದ ಸಂಘದ ನಿಯೋಗದ ಬೇಡಿಕೆಗೆ ಸ್ಪಂದಿಸಿ ಅವರು ಈ ಭರವಸೆ ನೀಡಿದರು.

ಷರತ್ತುಗಳ ಕಾರಣ ಶಾಲಾ ಮಾನ್ಯತೆ ನವೀಕರಣಕ್ಕೆ ಆಗುತ್ತಿರುವ ತೊಂದರೆ ಗಮನಕ್ಕೆ ಬಂದಿದೆ. ನ. 20ಕ್ಕೆ ಕೊನೆಗೊಳ್ಳಲಿರುವ ನವೀಕರಣ ಅವಧಿಯನ್ನು ವಿಸ್ತರಿಸಲಾಗುವುದು ಎಂದು ತಿಳಿಸಿದರು.ಇದಕ್ಕೂ ಮುನ್ನ ಸಂಘದ ರಾಜ್ಯ ಅಧ್ಯಕ್ಷ ರೇವಣಸಿದ್ದಪ್ಪ ಜಲಾದೆ ಅವರು, ಅನಾವಶ್ಯಕ ಷರತ್ತುಗಳಿಂದ ಕನ್ನಡ ಶಾಲೆಗಳ ಮಾನ್ಯತೆ ನವೀಕರಣಕ್ಕೆ ಬಹಳ ತೊಂದರೆಯಾಗುತ್ತಿದೆ. ಮಾನ್ಯತೆ ಅವಧಿ ಇಷ್ಟರಲ್ಲೇ ಮುಕ್ತಾಯಗೊಳ್ಳಲಿರುವ ಕಾರಣ ಶಾಲಾ ಆಡಳಿತ ಮಂಡಳಿಯವರು ಸಮಸ್ಯೆಯಲ್ಲಿದ್ದಾರೆ ಎಂದು ಗಮನ ಸೆಳೆದರು.ಶಾಲಾ ಆಡಳಿತ ಮಂಡಳಿಗಳು ಸಂಕಷ್ಟದ ಮಧ್ಯೆ ಕನ್ನಡ ಮಾಧ್ಯಮ ಶಾಲೆಗಳನ್ನು ನಡೆಸಿಕೊಂಡು ಬರುತ್ತಿವೆ. ಅದಾಗಿಯೂ ನೂರೆಂಟು ಷರತ್ತುಗಳನ್ನು ವಿಧಿಸಿದರೆ ಶಾಲೆ ನಡೆಸುವುದು ಕಷ್ಟ. ಇದರಿಂ ದಾಗಿಯೇ ಕನ್ನಡ ಶಾಲೆಗಳು ಸೊರಗುತ್ತಿವೆ ಎಂದು ಖಾಸಗಿ ಶಾಲೆಗಳ ಸಮಸ್ಯೆ ಎಳೆ ಎಳೆಯಾಗಿ ಬಿಡಿಸಿಟ್ಟರು.



1995 ರ ನಂತರದ ಕನ್ನಡ ಮಾಧ್ಯಮ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸಬೇಕು. ಆಯಾ ಜಿಲ್ಲೆಗಳಿಂದ ಅನುದಾನ ಸಂಬಂಧ ಸಲ್ಲಿಸಲಾದ ಖಾಸಗಿ ಶಾಲೆಗಳ ಪಟ್ಟಿ ಖೊಟ್ಟಿಯಾಗಿದೆ. ಈ ಅವಧಿಯಲ್ಲಿ ಆರಂಭವಾದ ಶಾಲೆಗಳ ಪೈಕಿ ಬಹಳಷ್ಟು ಕನ್ನಡ ಮಾಧ್ಯಮ ಶಾಲೆಗಳು ಆಂಗ್ಲ ಮಾಧ್ಯಮ ಶಾಲೆಗಳಾಗಿ ಪರಿವರ್ತನೆ ಹೊಂದಿವೆ. ಹೀಗಾಗಿ ಅನುದಾನಕ್ಕೆ ಅರ್ಹತೆ ಹೊಂದಿದ ಕನ್ನಡ ಶಾಲೆಗಳ ಸಂಖ್ಯೆ ಕಡಿಮೆ ಇದೆ ಎಂದು ತಿಳಿಸಿದರು.

ಖಾಸಗಿ ಶಾಲೆಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಸರ್ಕಾರ ನಿರ್ಧಾರ ಕೈಗೊಂಡರೆ, ಶಾಲೆಗಳ ಪಟ್ಟಿ ಹಾಗೂ ಅಗತ್ಯ ಅನುದಾನದ ಕುರಿತು ವರದಿ ಸಲ್ಲಿಸಲಾಗುವುದು ಎಂದು ರಶ್ಮಿ ವಿ. ಮಹೇಶ್ ಹೇಳಿದರು.

ಸಂಘದ ರಾಜ್ಯ ಉಪಾಧ್ಯಕ್ಷರಾದ ಎಂ. ಮೌಲಾಲಿ, ಡಿ. ನದಾಫ್, ಸೇರಿದಂತೆ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.ಸ

# ಕಲಾಗ್ರಾಮದಲ್ಲಿ ಸಕಲ ಸರ್ಕಾರಿ ಗೌರವದೊಂದಿಗೆ ಸಾಲುಮರದ ತಿಮಕ್ಕ ಅಂತ್ಯಕ್ರಿಯೆ

**ಬೆಂಗಳೂರು, ನ.15–** ಪದಶ್ರೀ ಪುರಸ್ಕೃತ ಪರಿಸರವಾದಿ ಸಾಲು ಮರದ ತಿಮಕ್ಕ ಅವರ ಅಂತ್ಯಕ್ರಿಯೆ ಇಂದು ಬೆಂಗಳೂರಿನ ಜ್ಞಾನಭಾರತಿ ವಿಶ್ವವಿದ್ಯಾನಿಲಯ ಸಮೀಪ ಕಲಾಗ್ರಾಮದಲ್ಲಿ ಸಕಲ ಸರ್ಕಾರಿ ಗೌರವದೊಂದಿಗೆ ನಡೆಯಿತು.

ದೀರ್ಘ ಕಾಲದ ಅನಾರೋಗ್ಯದಿಂದ ನಿನ್ನೆ ಖಾಸಗಿ ಆಸ್ಪತ್ರೆಯಲ್ಲಿ ಸಾಲು ಮರದ ತಿಮಕ್ಕ ನಿಧನರಾಗಿದರು. ಈ ಮೊದಲು ಅವರು ವಾಸಿಸುತ್ತಿದ್ದ ಬೇಲೂರಿಗೆ ಪಾರ್ಥಿವ ಶರೀರವನ್ನು ನಿನ್ನೆ ತೆಗೆದುಕೊಂಡು ಹೋಗಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು. ಬಳಿಕ ಇಂದು ಬೆಳಗ್ಗೆ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು.

ಗೃಹ ಸಚಿವ ಡಾ.ಜಿ.ಪರಮೇಶ್ವರ್, ಅರಣ್ಯ ಸಚಿವ ಈಶ್ವರ್ ಖಂಡ್ರೆ, ಕೇಂದ್ರ ಸಚಿವ ವಿ. ಸೋಮಣ್ಣ, ಸಚಿವೆ ಶೋಭಾ ಕರಂದ್ಲಾಜೆ, ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಪಿ.ಎಂ.ನರೇಂದ್ರ ಸ್ವಾಮಿ ಸೇರಿದಂತೆ ಅನೇಕರು ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದರು. ಅಂತ್ಯಕ್ರಿಯೆ ಸ್ಥಳ ನಿಗದಿ ಬಗ್ಗೆ ನಿನ್ನೆ ಒಂದಿಷ್ಟು ಗೊಂದಲಗಳಾಗಿದ್ದವು. ಸಾಲು ಮರದ ತಿಮಕ್ಕ ಅವರ ಸಂಬಂಧಿಕರು ಅವರು ಬಾಳು ಬದುಕಿದ ಮಾಗಡಿ ತಾಲ್ಲೂಕಿನ ಹುಲಿಕಲ್ ಗ್ರಾಮದಲ್ಲಿ ಪತಿಯ ಸಮಾಧಿ ಪಕ್ಕದಲ್ಲೆ ಅಂತ್ಯ ಸಂಸ್ಕಾರ ಮಾಡಬೇಕೆಂದು ಪಟ್ಟು ಹಿಡಿದರು.

ಮಾಗಡಿ ಕ್ಷೇತ್ರದ ಶಾಸಕ ಎಚ್.ಸಿ. ಬಾಲಕೃಷ್ಣ ಸಂಬಂಧಿಕರ ಜೊತೆ ಚರ್ಚೆ ನಡೆಸಿ ನಿಮ ಅಭಿಪ್ರಾಯಗಳನ್ನು ಸರ್ಕಾರಕ್ಕೆ ತಿಳಿಸುತ್ತೇನೆ. ಆದರೆ ತಿಮಕ್ಕ ಅವರ ಸಂಸ್ಕಾರದ ಬಗ್ಗೆ ಸರ್ಕಾರ ನಿರ್ಧಾರ ತೆಗೆದುಕೊಳ್ಳುತ್ತದೆ. ಅನಗತ್ಯವಾಗಿ ಗಲಾಟೆ ಮಾಡಿ, ಗೊಂದಲ ಉಂಟು ಮಾಡಬಾರದು ಎಂದು ಸಲಹೆ ನೀಡಿದರು.

ತಿಮಕ್ಕ ಅವರ ಸಾಕು ಮಗ ಉಮೇಶ್ ಅಜ್ಜಿ ಸಾಯುವ ಮುನ್ನವೇ ಎಲ್ಲಿ, ಯಾವ ರೀತಿ ಸಂಸ್ಕಾರವಾಗಬೇಕು ಎಂಬುದು ಸೇರಿದಂತೆ ಎಲ್ಲಾ ವಿಚಾರಗಳನ್ನು ವಿಲ್‌ನಲ್ಲಿ ಬರೆದಿದ್ದಾರೆ. ಗೃಹ ಸಚಿವ ಪರಮೇಶ್ವರ್ ಅವರು ಮಲೇಶಿಯಾದಿಂದ ನಿನ್ನೆ ರಾತ್ರಿ ವಾಪಸ್ ಬಂದಿದ್ದು, ಅವರು ಸ್ಥಳದ ಬಗ್ಗೆ ಸರ್ಕಾರದ ಜೊತೆ ಚರ್ಚಿಸಿ ನಿರ್ಧಾರ ತೆಗೆದುಕೊಳ್ಳಲಿದ್ದಾರೆ ಎಂದು ಹೇಳಿದರು.






ಇಂದು ಬೆಳಗ್ಗೆ ಅಂತಿಮ ದರ್ಶನಪಡೆದ ಪರಮೇಶ್ವರ್ ಅವರು, ಪದಶ್ರೀ ಪುರಸ್ಕೃತ ಸಾಲುಮರದ ತಿಮಕ್ಕ ಹೊಸ ಆದರ್ಶವನ್ನು ರೂಪಿಸಿದ್ದಾರೆ. ತಮ ಕುಟುಂಬಕ್ಕೆ ಬಹಳ ಹತ್ತಿರವಾಗಿದ್ದರು. ಅವರ ಅಗಲಿಕೆ ತುಂಬಲಾರದ ನಷ್ಟ ಉಂಟುಮಾಡಿದೆ ಎಂದು ಸಂತಾಪ ವ್ಯಕ್ತ ಪಡಿಸಿದರು. ದುಃಖಿತರಾದ ಸಾಕು ಮಗನನ್ನು ತಬ್ಬಿ ಪರಮೇಶ್ವರ್ ಸಂತೈಸಿದರು.

ಆರ್.ಅಶೋಕ್ ಮಾತನಾಡಿ, ಸಾಲುಮರದ ತಿಮಕ್ಕ ಇತಿಹಾಸದ ಪುಟ ಸೇರಿದ್ದಾರೆ. ಈಗಾಗಲೇ ವಿಶ್ವವಿದ್ಯಾನಿಲಯಗಳಲ್ಲಿ ತಿಮಕ್ಕ ಅವರ ಜೀವನ ಪಠ್ಯಕ್ರಮವಾಗಿದೆ. ಶಾಲಾ ಮಕ್ಕಳಿಗೂ ಪರಿಸರ ಜಾಗೃತಿ ಮೂಡಿಸುವ ಅಗತ್ಯವಿರುವುದರಿಂದ ಶಾಲೆಗಳ ಪಠ್ಯದಲ್ಲೂ ತಿಮಕ್ಕ ಅವರ ಜೀವನವನ್ನು ಅಳವಡಿಸಬೇಕು ಎಂದು ಒತ್ತಾಯಿಸಿದರು. ಸಚಿವೆ ಶೋಭಾಕರಂದ್ಲಾಜೆ, ಬಡ ಕುಟುಂಬದಲ್ಲಿ ಹುಟ್ಟಿದ ತಿಮಕ್ಕ ಅವರು ರಾಷ್ಟ್ರ ಮಟ್ಟದ ಸಾಧನೆ ಮಾಡಿದರು. ಎಲೆ–ಮರೆ ಕಾಯಿಯಂತಿದ್ದ ಅವರಿಗೆ 2019ರಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಪದಶ್ರೀ ಪ್ರದಾನ ಮಾಡುವ ಮೂಲಕ ಜಗದ್ವಿಖ್ಯಾತಗೊ ಳಿಸಿದರು ಎಂದು ಹೇಳಿದ್ದಾರೆ.

ಸಚಿವ ಸೋಮಣ್ಣ ತಮ ಉತ್ತಮ ಕಾರ್ಯಗಳಿಂದಾಗಿಯೇ ತಿಮಕ್ಕ ಶತಾಯುಷಿಗಳಾಗಿದ್ದರು. ಅವರು ಮತ್ತೆ ಹುಟ್ಟಿ ಬರಲಿ. ಇಂತಹ ವ್ಯಕ್ತಿಗಳು ರಾಜ್ಯ ಮತ್ತು ರಾಷ್ಟ್ರದಲ್ಲಿ ಹೆಚ್ಚಾಗಲಿ ಎಂದು ಹಾರೈಸಿದರು. ತಿಮಕ್ಕ ಅವರ ಪಾರ್ಥಿವ ಶರೀರದ ಮೇಲೆ ಬೆಂಗಳೂರು ನಗರ ಜಿಲ್ಲಾಧಿಕಾರಿಗಳು ರಾಷ್ಟ್ರ ಧ್ವಜವನ್ನು ಹೊದಿಸಿದರು. ನಂತರ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯ ಸಂಸ್ಕಾರ ನಡೆಯಿತು.

**ವೃಕ್ಷ ಮಾತೆ ನಿಧನಕ್ಕೆ ನಿರ್ಮಲಾನಂದನಾಥ ಶ್ರೀಗಳ ಸಂತಾಪ**–ವೃಕ್ಷ ಮಾತೆ ಎಂದು ಹೆಸರಾಗಿದ್ದ ಪರಿಸರ ಪ್ರೇಮಿ ಸಾಲುಮರದ ತಿಮಕ್ಕನವರು ಇನ್ನಿಲ್ಲವಾದುದು ಅತ್ಯಂತ ವಿಷಾದನೀಯ ಎಂದು ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷರಾದ ಡಾ. ಶ್ರೀ? ನಿರ್ಮಲಾನಂದನಾಥ ಮಹಾ ಸ್ವಾಮೀಜಿ ಅವರು ಸಂತಾಪ ಸೂಚಿಸಿದ್ದಾರೆ.

ಸಾಲು ಮರದ ತಿಮಕ್ಕ ಎಂದೇ ಜನಮಾನಸದಲ್ಲಿ ಶಾಶ್ವತ ಸ್ಥಾನ ಪಡೆದಿರುವ ತಿಮಕ್ಕನವರು ಬಡತನದ ಬೇಗೆಯ ನಡುವೆಯೂ ಆದರ್ಶಯುತ ಜೀವನನ್ನು ನಡೆಸಿ ಇಳೆಯ ಮೇಲಿನ ಬದುಕನ್ನು ಸಾರ್ಥಕಪಡಿಸಿಕೊಂಡವರು. ರಸ್ತೆ ಬದಿಯಲ್ಲಿ ನೆರಳು ನೀಡುವ ಮುನ್ನೂರಕ್ಕೂ ಹೆಚ್ಚು ಮರಗಳನ್ನು ಬೆಳೆಸಿ ಅವುಗಳನ್ನು ಹೆತ್ತ ಮಕ್ಕಳಂತೆ ಜೋಪಾನ ಮಾಡಿ ಸಲಹುವುದೇ ತನ್ನ ಜೀವಿತದ ಪರಮ ಕರ್ತವ್ಯ ಎಂದು ಭಾವಿಸಿ ತಮ ಜನವನ್ನು ಸಾರ್ಥಕಪಡಿಸಿಕೊಂಡ ಆದರ್ಶ ಜೀವಿ ಎಂದು ಶ್ರೀಗಳು ತಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

ಅಕ್ಷರ ಜ್ಞಾನದಿಂದ ವಂಚಿತರಾಗಿದ್ದ ತಿಮಕ್ಕನವರು ಯಾವುದೇ ಪ್ರಚಾರಕ್ಕಾಗಲೀ, ಪ್ರಶಸ್ತಿ ಪುರಸ್ಕಾರಗಳಿಗಾಲೀ ರಸ್ತೆ ಬದಿಯಲ್ಲಿ ಸಾಲು ಮರಗಳನ್ನು ಬೆಳೆಸಲಿಲ್ಲ. ಆದರೆ, ಅವರು ಮಾಡಿದ ಆ ಕಾಯಕ ಅವರಿಗೆ ರಾಜ್ಯ ಮತ್ತು ರಾಷ್ಟ್ರದ ಅತ್ಯುನ್ನತ ಪ್ರಶಸ್ತಿ ಪುರಸ್ಕಾರಗಳನ್ನು ತಂದು ಕೊಟ್ಟಿದೆ. ತಿಮಕ್ಕ ಇಂದು ಶಾಲಾ ಪುಸ್ತಕಗಳಲ್ಲಿ ಮಕ್ಕಳಿಗೆ ಪಾಠವಾಗಿದ್ದಾರೆ. ದೇಶ ವಿದೇಶಗಳಲ್ಲಿ ಇವರ ಹೆಸರಿನಲ್ಲಿ ಪರಿಸರ ಅಧ್ಯಯನ ಇರುವುದು ಇವರ ಪರಿಸರ ಪ್ರೀತಿಗೆ ಸಾಕ್ಷಿ ಎಂದು ಸ್ವಾಮೀಜಿ ಅವರು ಬಣ್ಣಿಸಿದ್ದಾರೆ.

ಇವರು ಪರಿಸರ ಸಂರಕ್ಷಣೆಗೆ ನೀಡಿರುವ ಕೊಡುಗೆಯನ್ನು ಪರಿಗಣಿಸಿ ನಮ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠವು 2016ನೇ ಸಾಲಿನ ಪ್ರತಿಷ್ಠಿತ ಚುಂಚಶ್ರೀ? ಪ್ರಶಸ್ತಿಯನ್ನು ನೀಡಿ ಇವರನ್ನು ಗೌರವಿಸಿದೆ. ಇಂಥ ಖ್ಯಾತಿವೆತ್ತ ತಿಮಕ್ಕನವರು ಇನ್ನಿಲ್ಲವಾದುದರಿಂದ ಸಮಾಜ ಓರ್ವ ಪರಿಸರ ಪ್ರೇಮಿಯನ್ನು, ಪರಿಸರ ಸಂರಕ್ಷಕಿಯನ್ನು ಕಳೆದುಕೊಂಡಂತಾಗಿದ್ದು, ನಾಡಿಗೆ ಅಪಾರ ನಷ್ಟವುಂಟಾಗಿದೆ. ಭಗವಂತನು ಇವರ ನಿಧನದಿಂದ ದುಃಖತಪ್ತರಾಗಿರುವ ಕುಟುಂಬ ವರ್ಗದವರಿಗೆ, ಬಂಧು ಬಳಗದವರಿಗೆ ಹಾಗೂ ಅಭಿಮಾನಿ ವೃಂದಕ್ಕೆ ದುಃಖವನ್ನು ಸಹಿಸುವ ಶಕ್ತಿಯನ್ನು, ತಿಮಕ್ಕನವರ ಆತಕ್ಕೆ ಚಿರಶಾಂತಿಯನ್ನು ನೀಡಲೆಂದು ಶ್ರೀಗಳು ಆಶಿಸಿದ್ದಾರೆ.

# ನಟಿಗೆ ಕಿರುಕುಳ ನೀಡಿದ ಆರೋಪದಲ್ಲಿ ಚಿತ್ರನಿರ್ಮಾಪಕ ಸೆರೆ



**ಬೆಂಗಳೂರು, ನ. 15–** ಚಲನಚಿತ್ರ ನಟಿಯೊಬ್ಬರ ಹಿಂದೆಬಿದ್ದು ಕಿರುಕುಳ ನೀಡುತ್ತಿದ್ದಾರೆ ಎಂಬ ಆರೋಪದ ಮೇಲೆ ಚಿತ್ರ ನಿರ್ಮಾಪಕನನ್ನು ಗೋವಿಂದರಾಜ ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.ಎವಿಆರ್ ಗ್ರೂಪ್ ಮಾಲೀಕ ಹಾಗೂ ಚಲನಚಿತ್ರ ನಿರ್ಮಾಪಕರಾಗಿರುವ ಅರವಿಂದ ವೆಂಕಟರೆಡ್ಡಿ (43) ಬಂಧಿತರು.

2021ರಲ್ಲಿ ಪರಿಚಯವಾದ ನಟಿಯ ಹಿಂದೆ ಬಿದ್ದಿದ್ದ ಅರವಿಂದ ವೆಂಕಟ ರೆಡ್ಡಿ ಮದುವೆಯಾಗುವುದಾಗಿ ಪುಸಲಾಯಿಸುತ್ತಿದ್ದ. ಆ ನಟಿ ಇಷ್ಟವಿಲ್ಲ ಎಂದರೂ ಆಗಾಗ್ಗೆ ಕಿರುಕುಳ ನೀಡಲಾರಂಭಿಸಿದ್ದಾನೆ. ಇತ್ತೀಚೆಗೆ ಶ್ರೀಲಂಕಾದಲ್ಲಿ ನಡೆದ ಲಾರ್ಸ್ ಕ್ರಿಕೆಟ್‌ಕಪ್ ಉದ್ಘಾಟನೆಗೆ ನಟಿಯನ್ನು ಆತ ಕರೆದೊಯ್ದಿದ್ದ. ಅಲ್ಲಿಯೂ ಸಹ ಆಕೆಗೆ ಕಿರುಕುಳ ನೀಡಿದ್ದಾನೆ. ಆತನ ವರ್ತನೆಯಿಂದ ನೊಂದಿದ್ದ ನಟಿ ಆರ್‌ಆರ್‌ನಗರ ಠಾಣೆ ಪೊಲೀಸರಿಗೆ ದೂರು ನೀಡಿದ್ದರೂ ಸಹ ಆ ಪೊಲೀಸರು ಯಾವುದೇ ಕ್ರಮಕೈಗೊಂಡಿರಲಿಲ್ಲ. ಹಾಗಾಗಿ ನಟಿ ನಗರ ಪೊಲೀಸ್ ಆಯುಕ್ತರನ್ನು ಭೇಟಿ ಮಾಡಿ ವಿಷಯ ತಿಳಿಸಿದ್ದಾರೆ. ಆಯುಕ್ತರು ಈ ಬಗ್ಗೆ ಕ್ರಮಕೈಗೊಳ್ಳು ವಂತೆ ಗೋವಿಂದರಾಜನಗರ ಪೊಲೀಸ್ ಠಾಣೆಗೆ ಪ್ರಕರಣವನ್ನು ವರ್ಗಾಯಿಸಿದ್ದಾರೆ.

ಎಸಿಪಿ ಚಂದನ್ ಅವರ ನೇತೃತ್ವದ ತಂಡ ತನಿಖೆ ಕೈಗೊಂಡಿತ್ತು. ಚಿತ್ರನಿರ್ಮಾಪಕ ಅರವಿಂದ್ ವೆಂಕಟರೆಡ್ಡಿ ಶ್ರೀಲಂಕಾದಿಂದ ನಗರಕ್ಕೆ ಬರುತ್ತಿರುವ ಮಾಹಿತಿ ತಿಳಿದು ಏರ್‌ಪೋರ್ಟ್‌ಗೆ ತೆರಳಿ ಆತನನ್ನು ವಶಕ್ಕೆ ಪಡೆದು ಮುಂದಿನ ಕ್ರಮಕೈಗೊಂಡಿದ್ದಾರೆ.

# ಐದನಿ ಚಿನ್ನದ ಪದಕ ಪ್ರಶಸ್ತಿ ಪ್ರದಾನ ಸಮಾರಂಭ

**ಬಳ್ಳಾರಿ, ನ.15–** ಐದು ದಶಕಗಳ ಕಾಲ ಪ್ರಾಗೈತಿಹಾಸಿಕ ಕ್ಷೇತ್ರದಲ್ಲಿ ಅಪಾರ ಸಾಧನೆ ಮಾಡಿದ ಸಂಶೋಧಕ ಜಂಗಮ ಡಾ. ರವಿ ಕೋರಿಶೆಟ್ಟರ್ ಎಂದು ಖ್ಯಾತ ಸಾಹಿತಿ ಕುಂ.ವೀರಭದ್ರಪ್ಪ ಅಭಿಪ್ರಾಯಪಟ್ಟರು.

ಬಳ್ಳಾರಿ ನಗರದ ಡಾ.ರಾಜಕುಮಾರ್ ರಸ್ತೆಯಲ್ಲಿರುವ ಡಾ. ಸುಭದ್ರಮ್ಮ ಮನ್ಸೂರು ಬಯಲು ರಂಗ ಮಂದಿರದಲ್ಲಿ ಬೆಂಗಳೂರಿನ ಐದನಿ ಎಂಟರ್‌ಟೈನ್‌ಮೆಂಟ್ ಸಂಸ್ಥೆ ಶುಕ್ರವಾರ ಆಯೋಜಿಸಿದ್ದ 2025ನೇ ಸಾಲಿನ ಪ್ರತಿಷ್ಠಿತ 'ಐದನಿ ಚಿನ್ನದ ಪದಕ' ಪ್ರಶಸ್ತಿ ಪ್ರದಾನ ಸಮಾರಂಭದ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಪ್ರೊ. ರವಿ ಕೋರಿಶೆಟ್ಟರ್ ಅವರು ಬಳ್ಳಾರಿ ಜಿಲ್ಲೆಯಲ್ಲಿ ಜನಿಸಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡ ಮಹಾನ್ ಸಂಶೋಧಕರು. ಅಂತಹ ಸಂಶೋಧಕರು ಅಂತಾರಾಷ್ಟ್ರೀಯ ಮಟ್ಟದ ಟೋನಿ ಜೋಸೆಫ್ ಅವರ ಅರ್ಲಿ ಹ್ಯುಮನ್ಸ್ ಸಂಶೋಧನಾ ಕೃತಿಯಲ್ಲಿ ಸ್ಥಾನ ಪಡೆದಿದ್ದಾರೆ. ಪ್ರಾಗೈತಿಹಾಸಿಕ ಸಂಶೋಧನೆಯ ಮೂಲಕ ನಮ್ಮ ಮುಂದೆ ಹೊಸ ಪ್ರಪಂಚವನ್ನು ಸೃಷ್ಟಿಸುತ್ತಾರೆ.ಇದು ಅಪಾಯಕಾರಿ ಸಂದರ್ಭ. ಗಾಂಧೀಜಿ ನೆಹ್ರು ಅಂಥವರನ್ನು ನೇಪಥ್ಯಕ್ಕೆ ಸರಿಸುವ ಹುನ್ನಾರವಾಗುತ್ತಿದೆ.ಇತಿಹಾಸ ಮರೆತರೆ ವರ್ತಮಾನವನ್ನು ಅರ್ಥಮಾಡಿಕೊಳ್ಳಲು ಸಾಧ್ಯವಿಲ್ಲ. ಕಲ್ಲಿನ ರಥ ಮಾತ್ರ ಮುಖ್ಯವಲ್ಲ. ಬಳ್ಳಾರಿ ಜಿಲ್ಲೆಯ ಕಲ್ಲು ಕಲ್ಲು ಕೂಡ ಮುಖ್ಯ.ರವಿ ಕೋರಿಶೆಟ್ಟರ್ ಅವರ ಆಂಗ್ಲ ಕೃತಿಗಳು ಕನ್ನಡ ಭಾಷೆಗೆ ಭಾಷಾಂತರವಾಗಬೇಕು. ಆ ಮೂಲಕ ಸಮಸ್ತ ಕನ್ನಡಿಗರಿಗೆ ಅವರ ಸಂಶೋಧನಾ ಸಾಹಿತ್ಯ ತಲುಪಬೇಕಿದೆ, ಅವರ ಸಂಶೋಧನೆಗಳು ಶಾಶ್ವತವಾಗಿ ಉಳಿಯಬೇಕು ಎಂದರು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು, ಖ್ಯಾತ ಪ್ರಾಗೈತಿಹಾಸಿಕ ತಜ್ಞ ಪ್ರೊ. ರವೀಂದ್ರ ಕೋರಿಶೆಟ್ಟರ್, ನನಗೆ ದೇವನೂರು ಮಹಾದೇವ ಹಾಗೂ ಹಂಸಲೇಖ ಹಿರಿಯ ಸೋದರರಾಗಿದ್ದಾರೆ.ಬಾಲ್ಯದಿಂದಲೂ ಸಮಾಜಮುಖಿ ಜೀವನ ನಡೆಸುವ ಉದ್ದೇಶವಿತ್ತು. ಆದರೆ, ನಾನು ಆಯ್ಕೆ ಮಾಡಿಕೊಂಡ ಕ್ಷೇತ್ರ ಸಮಾಜದಿಂದ ದೂರವಿರಿಸಿತು. ಜನ ಸಾಮಾನ್ಯರಿಗೆ ಹತ್ತಿರವಾಗುವ ತುಡಿತ ಸದಾ ಇತ್ತು. ಕನ್ನಡ ಭಾಷೆಯ ಮೂಲಕ ನನ್ನ ಸಮಾಜಮುಖಿ ಜೀವನ ಈಗ ಸಾಧ್ಯವಾಗುತ್ತಿದೆ.

ನಮ್ಮ ಜೀವಮಾನ ಸೀಮಿತ. ನಮ್ಮ ಪೂರ್ವೇತಿಹಾಸ ಲಕ್ಷಾಂತರ ವರ್ಷದ್ದು. ಮನುಷ್ಯನಿಗೆ ಸವಾಲುಗಳು ಎದುರಾದಾಗ ವೈವಿಧ್ಯಮಯ ರೀತಿಗಳಿಂದ ಪರಿಹರಿಸಿಕೊಳ್ಳುವ ಪ್ರಯತ್ನ ಮಾಡುತ್ತಾನೆ.ಭವಿಷ್ಯದ ಪೀಳಿಗೆಗೆ ನಮ್ಮ ಜ್ಞಾನ ಪರಂಪರೆಯನ್ನು ಸಾಗಿಸಬೇಕು. ವೈಜ್ಞಾನಿಕ ಚೌಕಟ್ಟಿರುವ ಪುರಾತತ್ವ ಶಾಸ್ತ್ರ ಯಾವುದೇ



ವೇದ, ಪುರಾಣ ಮತ್ತಿತರ ಕೃತಿಗಳು ಹೇಳಿಕೊಡದ ಪಾಠ ಕಲಿಸುತ್ತವೆ ಎಂದರು.ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್, ಇತಿಹಾಸವನ್ನು ಅರ್ಥಮಾಡಿಕೊಂಡರೆ ನಮ್ಮ ನಡುವಿನ ಸಮಸ್ಯೆಗಳಿಗೆ ಸೂಕ್ತ ಪರಿಹಾರ ದೊರೆಯುತ್ತದೆ. ಧರ್ಮ, ಸಂಸ್ಕೃತಿ, ಭಾಷೆ ಇತ್ಯಾದಿಗಳು ನಾವು ಕಟ್ಟಿಕೊಂಡದ್ದು. ಆದರೆ, ಮೂಲದಲ್ಲಿ ನಾವೆಲ್ಲರೂ ಒಂದೇ ಅನ್ನೋದನ್ನು ಪ್ರಾಗೈತಿಹಾಸಿಕ ಅಧ್ಯಯನ ತಿಳಿಸಿಕೊಡುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಖ್ಯಾತ ಸಂಗೀತ ನಿರ್ದೇಶಕ ಡಾ. ಹಂಸಲೇಖ, ಶಿಕ್ಷಣಕ್ಕೆ ಮತ್ತು ವಿಜ್ಞಾನಕ್ಕೆ ವೈಚಾರಿಕತೆ ಬೇಕು. ಬದುಕಿಗೆ ತನ್ಮಯತೆ ಬೇಕು. ಎರಡೂ ಒಂದಕ್ಕೊಂದು ಸಂಬಂಧ ಇರಿಸಿಕೊಂಡಿವೆ. ಭವಿಷ್ಯಕ್ಕೆ ಏನೋ ಬೇಕು. ಅದಕ್ಕೆ ವರ್ತಮಾನದಲ್ಲಿ ಏನೋ ಆಗಬೇಕು. ಅಂತಹ ಸಂದರ್ಭದಲ್ಲಿ ನಾವಿದ್ದೇವೆ. ವಿಜಯನಗರ ಸಾಮ್ರಾಜ್ಯಕ್ಕೆ ಐದು ನೂರು ವರ್ಷಗಳ ಇತಿಹಾಸವಿದೆ. ಆದರೆ, ಮನುಷ್ಯನ ಇತಿಹಾಸಕ್ಕೆ ಸಹಸ್ರಾರು ವರ್ಷಗಳ ಹಿನ್ನೆಲೆ ಇದೆ. ಅದರ ಅಧ್ಯಯನ ಆಗಬೇಕು ಎಂದರು.

ಸಂಗನಕಲ್ಲಿನ ಬೀರಪ್ಪ ಶಿಲಾ ಚಪ್ಪರಕ್ಕೆ (ರಾಕ್ ಶೆಲ್ಟರ್‌ಗೆ) ಸಂರಕ್ಷಣೆ ಒದಗಿಸಬೇಕಿದೆ. ಅದಕ್ಕೆ ಬೇಕಾದ ಸಂಪನ್ಮೂಲವನ್ನು ಸಂಗ್ರಹಿಸಲು ಉಚಿತವಾಗಿ ಸಂಗೀತ ಕಾರ್ಯಕ್ರಮ ನೀಡಲು ನಾವು ಸಿದ್ಧರಿದ್ದೇವೆ. ಜಿಲ್ಲಾಡಳಿತ ಶೀಘ್ರದಲ್ಲೇ ಈ ಅವಕಾಶ ಸೃಷ್ಟಿಸಲಿ ಎಂದು ಅಪರ ಜಿಲ್ಲಾಧಿಕಾರಿಯವರನ್ನು ಹಂಸಲೇಖ ಕೋರಿದರು.ವನ್ಯಜೀವಿ ತಜ್ಞ ಡಾ. ಸಮದ್ ಕೊಟ್ಟೂರು ಐದನಿ ಚಿನ್ನದ ಪದಕ ಪ್ರಶಸ್ತಿ ವಿಜೇತ ಪ್ರೊ. ರವಿ ಕೋರಿಶೆಟ್ಟರ್ ಅವರ ಸಾಹಸಮಯ ಜೀವನ ಕುರಿತು ಮಾತನಾಡಿದರು.ವೇದಿಕೆಯಲ್ಲಿ ಸಾಹಿತಿ, ಸಾಮಾಜಿಕ ಹೋರಾಟಗಾರ್ತಿ ಲೀಲಾ ಸಂಪಿಗೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ್ ಉಪಸ್ಥಿತರಿದ್ದರು.ರಾಚೋಟಯ್ಯ ಸ್ವಾಗತಿಸಿದರು. ಪತ್ರಕರ್ತ ಹರ್ಷಕುಮಾರ್ ಕುಗ್ವೆ ಪ್ರಾಸ್ತಾವಿಕ ನುಡಿಗಳನ್ನು ಆಡಿದರು. ಸೌಮ್ಯ ಕೋಡೂರು ನಿರ್ವಹಿಸಿದರು. ಅಶ್ವಿನಿ ಡಿ.ವಿ. ವಂದಿಸಿದರು.

# ಸಿಎಂ ಆಪ್ತರ ಔತಣಕೂಟ ಮುಂದೂಡಿಕೆ, ನಾಯಕತ್ವ ಬದಲಾವಣೆ ಚರ್ಚೆಗೆ ಬ್ರೇಕ್

**ಬೆಂಗಳೂರು, ನ.15–** ಬಿಹಾರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಸೋತು ಸೊರಗಿದ ಹಿನ್ನೆಲೆಯಲ್ಲಿ ದೆಹಲಿಯಲ್ಲಿ ನಡೆಯ ಬೇಕಿದ್ದ ಕರ್ನಾಟಕ ಸಚಿವ ಸಂಪುಟ ವಿಸ್ತರಣೆ ಮತ್ತು ರಾಜ್ಯದ

ನಾಯಕತ್ವ ಬದಲಾವಣೆಯ ಚರ್ಚೆಗಳು ಕ್ಷೀಣವಾಗಿವೆ.ಸಿಎಂ ಸಿದ್ದರಾಮಯ್ಯ ಅವರ ಬಲ ಪ್ರದರ್ಶನಕ್ಕಾಗಿ ದೆಹಲಿಯಲ್ಲಿ ಆಯೋಜಿಸಿದ್ದ ಔತಣಕೂಟ ಕೂಡ ಮುಂದೂಡಿಕೆಯಾಗಿರುವ ಮಾಹಿತಿ ಇದೆ.ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿನಿಂದ ಮೂರು ದಿನಗಳ ಕಾಲ ದೆಹಲಿ ಪ್ರವಾಸ ಕೈಗೊಳ್ಳುವ ಪೂರ್ವ ನಿರ್ಧರಿತ ಕಾರ್ಯಕ್ರಮಗಳಿದ್ದವು. ಆದರೆ ಬಿಹಾರ ಚುನಾವಣೆ ಫಲಿತಾಂಶದ ಹಿನ್ನೆಲೆಯಲ್ಲಿ ಪ್ರವಾಸ ಮೊಟಕು ಗೊಂಡಿದೆ.

ವಾಪಸ್ಸು ಬರುವ ಬಗ್ಗೆ ನಿರ್ದಿಷ್ಟ ವೇಳಾ ಪಟ್ಟಿ ತಿಳಿದು ಬಂದಿಲ್ಲ. ದೆಹಲಿಯಲ್ಲಿ ಕೇಂದ್ರ ಸಚಿವರ ಜೊತೆಗೆ ಕಾಂಗ್ರೆಸ್ ಹೈಕಮಾಂಡ್ ನಾಯಕರನ್ನು ಸಿದ್ದರಾಮಯ್ಯ ಭೇಟಿ ಮಾಡುವ ಪ್ರಯತ್ನ ಮಾಡುತ್ತಿದ್ದಾರೆ. ರಾಜ್ಯ ಸಭಾ ಸದಸ್ಯ ಕಪಿಲ್ ಸಿಬ್ಬಾಲ್ ಅವರ ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಭಾಗವಹಿಸಲಿರುವ ಸಿದ್ದರಾಮಯ್ಯ, ಡಿ.ಕೆ.ಶಿವಕು ಮಾರ್ ಹಾಗೂ ಇತರ ನಾಯಕರು ನಾಳೆ ದೆಹಲಿಯಲ್ಲೆ ಉಳಿದು ಪಕ್ಷದ ವರಿಷ್ಠರ ಜೊತೆ ರಾಜ್ಯ ರಾಜಕಾರಣದ ಬಗ್ಗೆ ಮಹತ್ವದ ಚರ್ಚೆ ನಡೆಸಲಿದ್ದಾರೆ ಎಂದು ಹೇಳಲಾಗಿತ್ತು.

ರಾಹುಲ್‌ಗಾಂಧಿ ಅವರು ಭೇಟಿಗೆ ಸಮಯ ಕೊಟ್ಟರೆ, ಸಚಿವ ಸಂಪುಟ ಪುನರ್‌ರಚನೆ ಬಗ್ಗೆ ಚರ್ಚೆ ಮಾಡುವುದಾಗಿ ಸಿದ್ದರಾಮಯ್ಯ ಖುದ್ದು ಸುಳಿವು ನೀಡಿದ್ದರು.ಆದರೆ ಬಿಹಾರದ ಸೋಲಿನಿಂದ ಕಾಂಗ್ರೆಸ್ ನಲ್ಲಿ ಸೂತಕದ ವಾತಾವರಣ ಇದೆ. ಈ ಸಂದರ್ಭದಲ್ಲಿ ಔತಣಕೂಟ ಆಯೋಜಿಸುವುದು ಮತ್ತು ಸಂಪುಟ ಪುನರ್‌ರಚನೆ ಸೇರಿದಂತೆ ರಾಜಕೀಯ ಚರ್ಚೆಮಾಡುವು



ದು ಸರಿಯಲ್ಲ ಎಂದು ನಾಯಕರು ನಿರ್ಧಾರಕ್ಕೆ ಬಂದಂತಿದೆ.

ದೆಹಲಿಯಲ್ಲಿ ಸಂಜೆ ಸಂಸದ ರಾಜಶೇಖರ ಹಿಟ್ನಾಳ್ ಅವರ ಮನೆಯಲ್ಲಿ ನಡೆಯಬೇಕಿದ್ದ ಔತಣಕೂಟವನ್ನು ಮುಂದೂಡಲಾಗಿದೆ ಎಂದು ಮೂಲಗಳು ತಿಳಿಸಿವೆ. ಮುಖ್ಯಮಂತ್ರಿ ಅವರ ಕಾರ್ಯಕ್ರಮಗಳು ಕೊನೆ ಕ್ಷಣದಲ್ಲಿ ಏರುಪೇರಾಗಿವೆ. ಸಿದ್ದರಾಮಯ್ಯ ಅವರ ನಾಯಕತ್ವ ಬದಲಾಗಬೇಕು ಎಂದು ಡಿ.ಕೆ.ಶಿವಕುಮಾರ್ ಬಳಗದ ಬಹಳಷ್ಟು ಪ್ರಮುಖರು ಹೇಳಿಕೆ ನೀಡಿದ್ದಲ್ಲದೇ, ಅದಕ್ಕೆ ಪೂರಕವಾಗಿ ತೆರೆಮರೆಯಲ್ಲಿ ಚಟುವಟಿಕೆಗಳನ್ನು ನಡೆಸಲಾಗಿತ್ತು.

ಆದರೆ ಎಲ್ಲವೂ ಈಗ ತಿರುವು–ಮುರುವಾಗಿದೆ. ಸಚಿವ ಸಂಪುಟದಲ್ಲಿ ಸ್ಥಾನ ಪಡೆಯುವ ಉದ್ದೇಶದಿಂದ ಮುಖಂಡರ ಬೆನ್ನತ್ತಿ ಲಾಬಿ ನಡೆಸಿದ್ದ ಶಾಸಕರು ನಿರಾಶೆಗೊಳಗಾಗಿದ್ದಾರೆ. ಸಿದ್ದರಾಮಯ್ಯ ಅವರು ದೆಹಲಿಯಲ್ಲಿ ವರಿಷ್ಠರನ್ನು ಭೇಟಿ ಮಾಡುವ ಸಾಧ್ಯತೆ ಇದೆಯಾದರೂ ರಾಜ್ಯ ರಾಜಕಾರಣದ ಬಗ್ಗೆ ಚರ್ಚೆಯಾಗುವುದು ಕ್ಷೀಣ ಎನ್ನಲಾಗುತ್ತಿದೆ.

# ಡಾ. ಉಮರ್ ಬಾಂಬ್ ತಯಾರಿಕೆ ರೂವಾರಿ: ತನಿಖೆಯಿಂದ ದೃಢ

**ನವದೆಹಲಿ,ನ.15–** ದೆಹಲಿಯ ಕೆಂಪುಕೋಟೆಯ ಬಳಿ ನಡೆದ ಬಾಂಬ್ ಸ್ಫೋಟ ಪ್ರಕರಣದಲ್ಲಿ ಡಾ. ಉಮರ್ ಮೊಹಮ್ಮದ್ ಬಾಂಬ್ ತಯಾರಿಕೆ ಕಾರ್ಯಾಚರಣೆಯ ಹಿಂದಿನ ಮಾಸ್ಟರ್ ಮೈಂಡ್ ಎನ್ನುವುದನ್ನು ವಿಧಿವಿಜ್ಞಾನ ತನಿಖೆಗಳು ದೃಢಪಡಿಸಿವೆ.

ಇಂಧನ ತೈಲ ಮತ್ತು ಟ್ರಾನ್ಸ್‌ಫಾರ್ಮರ್ ಎಣ್ಣೆಯೊಂದಿಗೆ ಅಮೋನಿಯಂ ನೈಟ್ರೇಟ್ ಅನ್ನು ಬೆರೆಸಿ ಅವರು ಪ್ರಬಲ ಸ್ಫೋಟಕ ತಯಾರಿಸಿರುವುದನ್ನು ಪತ್ತೆ ಹಚ್ಚಲಾಗಿದೆ.

ದೆಹಲಿ ಸ್ಫೋಟ ಪ್ರಕರಣದಲ್ಲಿ ಮಹತ್ವದ ಬೆಳವಣಿಗೆಯೊಂದರಲ್ಲಿ, ದಾಳಿಯಲ್ಲಿ ಬಳಸಲಾದ ಐ–20 ಕಾರಿನ ಬಗ್ಗೆ ತನಿಖಾಧಿಕಾರಿಗಳು ನಿರ್ಣಾಯಕ ವಿವರ ಬಹಿರಂಗಪಡಿಸಿದ್ದು ಈ ಕಾರನ್ನು ಫರಿದಾಬಾದ್‌ನ ಡೀಲರ್‌ನಿಂದ 2 ಲಕ್ಷ ರೂ.ಗಳಿಗೆ ಖರೀದಿಸಲಾಗಿದ್ದು, ಜಮ್ಮು ಮತ್ತು ಕಾಶ್ಮೀರದ ಚಾಲನಾ ಪರವಾನಗಿ ದಾಖಲೆಯಾಗಿ ಸಲ್ಲಿಸಲಾಗಿದೆ.

ಕಾರುಕೊಳ್ಳಲು ಸಂಪೂರ್ಣ ಹಣವನ್ನು ನಗದು ರೂಪದಲ್ಲಿ ನೀಡಲಾಗಿದೆ. ಐ–20 ಕಾರು 60 ಪ್ರತಿಶತ ಸ್ಫೋಟದ ಹಿಂದಿನ ನಿಗೂಢತೆಯನ್ನು ಪರಿಹರಿಸಲು ಸಹಾಯ ಮಾಡಿದೆ ಎಂದು ವಿಧಿವಿಜ್ಞಾನ ವಿಶ್ಲೇಷಣೆಯು ಬಹಿರಂಗಪಡಿಸಿದೆ. ಸ್ಥಳದಲ್ಲಿ ಕಂಡು ಬಂದ ತೆಳುವಾದ ತಂತಿಗಳು ಸ್ಫೋಟ ಸಾಮಗ್ರಿಗಳನ್ನು ಪಡೆದು ಆ ಮೂಲಕ ಈ ವಿಷಯ ಪತ್ತೆ ಮಾಡಿದ್ದಾರೆ.

ಸರ್ಕ್ಯೂಟ್‌ಗೆ ಹಸ್ತಚಾಲಿತ ಸ್ವಿಚ್ ಅಗತ್ಯವಿತ್ತು, ಇದನ್ನು ಉಮರ್ ಸ್ಫೋಟವನ್ನು ಪ್ರಚೋದಿಸಲು ಮನೆಯ ಆನ್–ಆಫ್ ಸ್ವಿಚ್‌ನಂತೆ ಕಾರ್ಯನಿರ್ವಹಿಸುತ್ತಿದ್ದರು ಎಂದು ವಿಧಿವಿಜ್ಞಾನ ತಜ್ಞರು





ಹೇಳಿದ್ದಾರೆ. ಈ ಬಾಂಬ್ ಜೋಡಣೆ ಪ್ರಕ್ರಿಯೆ ಕೇವಲ ಐದರಿಂದ ಹತ್ತು ನಿಮಿಷಗಳನ್ನು ತೆಗೆದುಕೊಳ್ಳುತ್ತದೆ ಮತ್ತು ಬಳಸಿದ ಡಿಟೋನೇಟರ್‌ಗಳನ್ನು ಸಾಮಾನ್ಯ ಕಲ್ಲಿದ್ದಲು ಗಣಿಗಳಿಂದ ಸುಲಭವಾಗಿ ಪಡೆಯಬಹುದು ಎಂದು ಹೇಳಲಾಗಿದೆ.

ವೈದ್ಯ ಉಮರ್ ಮೊಹಮ್ಮದ್ ಬಾಂಬ್ ಅನ್ನು ಎಲ್ಲಿ ಜೋಡಿಸಿದರು ಮತ್ತು ಟೈಮರ್ ಮತ್ತು ಡಿಟೋನೇಟರ್ ವೈರಿಂಗ್ ಅನ್ನು ಸಂಪರ್ಕಿಸಿದರು ಎಂಬುದನ್ನು ಪತ್ತೆ ಮಾಡಲು ತನಿಖಾಧಿಕಾರಿಗಳು ತನಿಖೆ ಮತ್ತಷ್ಟು ತೀವ್ರಗೊಳಿಸಿದ್ದಾರೆ.

ಕೆಂಪು ಕೋಟೆ ಪಾರ್ಕಿಂಗ್ ಪ್ರದೇಶದಲ್ಲಿ ನಿಲ್ಲಿಸಲಾದ ಮೂರು ಗಂಟೆಗಳ ಸಮಯದಲ್ಲಿ ಅಥವಾ ಸ್ವಿಚ್ ಈಗಾಗಲೇ ಕೈಯಲ್ಲಿಟ್ಟುಕೊಂಡು ದೆಹಲಿಗೆ ಪ್ರವೇಶಿಸುವ ಮೊದಲು. ವಿವರವಾದ ವಿಧಿವಿಜ್ಞಾನ ವಿಶ್ಲೇಷಣೆ ಮತ್ತು ಮಾರಕ ಸ್ಫೋಟಕ್ಕೆ ಕಾರಣವಾದ ಘಟನೆಗಳ ಸಂಪೂರ್ಣ ಅನುಕ್ರಮ ಬಹಿರಂಗಪಡಿಸಲು ಬಹು ಮಾದರಿಗಳನ್ನು ಒಳಗೊಂಡ ತನಿಖೆ ಮುಂದುವರೆದಿದೆ.

## ಸಾಲುಮರದ ತಿಮ್ಮಕ್ಕ ಅವರಿಗೆ ನಗರದಲ್ಲಿ ಶ್ರದ್ಧಾಂಜಲಿ ಸಭೆ



**ಬೀದರ್,ನ.15–** "ಸಾಲುಮರದ ತಿಮ್ಮಕ್ಕ ಅವರ ತತ್ವ–ಸಿದ್ಧಾಂತಗಳು ಸಮಾಜಕ್ಕೆ ಶಾಶ್ವತ ಮಾದರಿ" ಎಂದು ಹಿರಿಯ ಪರಿಸರ ಪ್ರೇಮಿ ವೀರಭದ್ರಪ್ಪ ಉಪ್ಪಿನ್ನವರು ಅಭಿಪ್ರಾಯ ಪಟ್ಟರು. ಅವರು ನಗರದಲ್ಲಿರುವ ಬೀರದ ಶಾಹಿ ಗಾರ್ಡನ್‌ನಲ್ಲಿ ಆಯೋಜಿಸಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಮಾತನಾಡಿದರು.

1911ರ ಜೂನ್ 30ರಂದು ತುಮಕೂರು ಜಿಲ್ಲೆಯ ಹಳ್ಳಿಯೊಂದರಲ್ಲಿ ಜನಿಸಿದ ತಿಮ್ಮಕ್ಕ ಅವರು ಭಾರತೀಯ ಪರಿಸರ ಚಳವಳಿಯ ಪ್ರಮುಖ ಮುಖವಾಗಿದ್ದರು. ಪದ್ಮಶ್ರೀ, ರಾಜ್ಯೋತ್ಸವ, ಇಂದಿರಾ ಪ್ರಿಯದರ್ಶಿನಿ, ವೃಕ್ಷಮಿತ್ರ, ನಾಡೋಜ ಸೇರಿದಂತೆ ಅನೇಕ ಗೌರವಗಳನ್ನು ತಮ್ಮ ಹೆಸರಿನೊಂದಿಗೆ ಸೇರಿಸಿಕೊಂಡಿದ್ದರು.

ಮಕ್ಕಳಿಲ್ಲದ ದುಃಖವನ್ನು ಹೃದಯಕ್ಕೆ ಇಟ್ಟುಕೊಳ್ಳದೆ, ಪ್ರಕೃತಿಯನ್ನೇ ತನ್ನ ಕುಟುಂಬವನ್ನಾಗಿ ಮಾಡಿಕೊಂಡು, ಹುಲಿಕಲ್ ಪ್ರದೇಶದಲ್ಲಿ 385 ಆಲದ ಮರಗಳು ಮತ್ತು 8000 ಗಿಡಮರಗಳನ್ನು ಪೋಷಿಸಿದ ಉದಾಹರಣೆಯನ್ನೂ ಅವರು ಸ್ಮರಿಸಿದರು.

ಸಭೆಯಲ್ಲಿ ಮಾತನಾಡಿದ ಯೋಗ ಮೇಲ್ವಿಚಾರಕ ಗಂಗಪ್ಪ ಸಾವಳೇಯವರು,

"ಮಾನವನು ತನ್ನ ಸ್ವಾರ್ಥಕ್ಕಾಗಿ ಪರಿಸರ ಹಾಳು ಮಾಡದೆ, ಸಂರಕ್ಷಿಸಬೇಕಾದ ಹೊಣೆಗಾರಿಕೆ ನಮ್ಮದಾಗಿದೆ" ಎಂದು ಹೇಳಿದರು.

ಬ್ರಿಮ್ಸ್ ಆಸ್ಪತ್ರೆಯ ಪ್ರಯೋಗಶಾಲಾ ತಂತ್ರಜ್ಞ ಅರವಿಂದ ಕುಲಕರ್ಣಿಯವರು,"ತಿಮ್ಮಕ್ಕ ಅವರ ಜೀವನವೇ ಪರಿಸರ ಜಾಗೃತಿ ಮತ್ತು ಮಾಲಿನ್ಯ ನಿಯಂತ್ರಣದ ಪಾಠ ಪುಸ್ತಕ" ಎಂದು ನುಡಿದರು.ಪ್ರಸಿದ್ಧ ಮಕ್ಕಳ ತಜ್ಞ ಡಾ. ಸಿ.ಎಸ್. ಮಾಲಿಪಾಟೀಲ ಅವರು,

"ಗಿಡ–ಮರಗಳ ಪಾಲನೆ ಪೋಷಣೆಯಲ್ಲಿ ತೊಡಗಿಸಿಕೊಂಡ ಜೀವನಶೈಲಿಯೇ ಅವರಿಗೆ 114 ವರ್ಷ 4 ತಿಂಗಳು 14 ದಿನಗಳ ದೀರ್ಘಾಯುಷ್ಯ ನೀಡಿದೆ" ಎಂದು ಅಭಿಪ್ರಾಯಪಟ್ಟರು.ವೀರಭದ್ರಪ್ಪ ಉಪ್ಪಿನ್ನವರು ಸಭೆಯ ಕೊನೆಯಲ್ಲಿ ಹಾಜರಿದ್ದ ಎಲ್ಲರಿಗೂ ಪರಿಸರ ಸಂರಕ್ಷಣೆ ಮತ್ತು ಮಾಲಿನ್ಯ ಕಡಿತದ ಪ್ರತಿಜ್ಞಾವಿಧಿ ಮಾಡಿಸಿದರು.

ಸಭೆಯಲ್ಲಿ ಮಲ್ಲಿಕಾರ್ಜುನ ಪಾಟೀಲ, ನಿಜಲಿಂಗಪ್ಪ ತಗಾರೆ, ಈಶ್ವರ್ ಕನ್ನೇರಿ, ಸಂಜುಕುಮಾರ ಶೀಲವಂತ, ಬಸವರಾಜ ತೋರಣ, ವೀರಶೆಟ್ಟಿ, ಮಲ್ಲಿಕಾರ್ಜುನ ಹಂಡೆ, ಅರುಣಾ ಪಾಟೀಲ, ಸುಲೋಚನಾ, ರಾಚಯ್ಯಸ್ವಾಮಿ, ಗೋವರ್ಧನ, ಶಂಕರ ಚಿದ್ರಿ, ಮೋಹನ ಎಳನೂರಕರ್, ಶ್ರೀಮತಿ ಜನವಾಡಕರ, ಹಿರೇಮಠ, ರೆಡ್ಡಿ ಸೇರಿದಂತೆ ಹಲವರು ಹಾಜರಿದ್ದರು.

## ಬಿರುಸಿನಿಂದ ಸಾಗಿದ ನ್ಯಾಯವಾದಿಗಳ ಸಂಘದ ಚುನಾವಣೆ– ವಿಜಯ ಮಾಲೆ ಯಾರಿಗೆ ?



ಯುವ ಮಾರ್ಗ ಸುದ್ದಿ

**ಸಿಂಧನೂರು:ನ.15–**ಸಿಂಧನೂರು ತಾಲೂಕ ನ್ಯಾಯವಾದಿಗಳ ಸಂಘದ ಚುನಾವಣೆಯಮತದಾನ ಜೋರಾಗಿ ನಡೆದಿದ್ದು, ವಿಜಯ ಮಾಲೆ ಯಾರಿಗೆ ಒಲಿಯುವದೆ ಎನ್ನುವುದು ಕುತೂಹಲಕಾರಿಯಾಗಿದೆ. ಕಾರ್ಯದರ್ಶಿ ,ಖಜಾಂಚಿ ಸ್ಥಾನಗಳು ಅವಿರೋಧ ಆಯ್ಕೆಯಾದ ಬಳಿಕ ಇಂದು ಅಧ್ಯಕ್ಷ ಸ್ಥಾನಕ್ಕೆ ತೀವ್ರ ಪೈಪೋಟಿಯಲ್ಲಿರುವ ಕೆ.ಭೀಮನಗೌಡ ಹಾಗೂಪಂಪಣ್ಣ ತಮ್ಮದೇ ಆದ ರೀತಿಯಲ್ಲಿ ಮೇಟಿ ಮತಯಾಚನೆಯನ್ನು ಮಾಡಿದ್ದಾರೆ.320 ಮತಗಳಲ್ಲಿ – ಮಧ್ಯಾಹ್ನದ ಸಮಯಕ್ಕೆ 206 – । ಚಲಾವಣೆಯಾಗಿವೆಂದು ಚುನಾವಣಾಧಿಕಾರಿ ಮಾಹಿತಿ ನೀಡಿದರು.

ಅಧ್ಯಕ್ಷಸ್ಥಾನದಲ್ಲಿ ಇಬ್ಬರು,ಉಪಾಧ್ಯಕ್ಷ ಸ್ಥಾನದಲ್ಲಿ ಮೂವರು ಜಂಟಿ ಇದ್ದು ಮತದಾನ ನಡೆದಿದೆ.4 ಕಾರ್ಯದರ್ಶಿ ಸ್ಥಾನದಲ್ಲಿ ಇಬ್ಬರು ಗಂಟೆ ವರೆಗೆ ಮತದಾನ ನಂತರ ಮತಏಕೆ ನಡೆಯುತ್ತದೆ ಎಂದು ತಿಳಿಸಿದರು.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**

**9743497111,9743496111**

## ಅಥ್ಲೆಟಿಕ್ ಕ್ರೀಡಾಕೂಟ: ಎನ್ ಎಂ ಎಸ್ ಪ್ರೌಢಶಾಲೆಯ ವಿದ್ಯಾರ್ಥಿನಿ ಅನನ್ಯ ರಾಜ್ಯಮಟ್ಟಕ್ಕೆ ಆಯ್ಕೆ



ಯುವ ಮಾರ್ಗ ಸುದ್ದಿ

**ಮಸ್ಕಿ,ನ.15–** ಇತ್ತೀಚಿಗೆ ರಾಯಚೂರು ನಗರದ ಮಹಾತ್ಮ ಗಾಂಧಿ ಜಿಲ್ಲಾಕ್ರೀಡಾಂಗಣದಲ್ಲಿ ಶಾಲಾ ಶಿಕ್ಷಣ ಇಲಾಖೆ ವತಿಯಿಂದ 2025–26ನೇ ಸಾಲಿನಲ್ಲಿ ನಡೆದ ಜಿಲ್ಲಾಮಟ್ಟದ ಅಥ್ಲೆಟಿಕ್ ಕ್ರೀಡಾಕೂಟದಲ್ಲಿ ಮಸ್ಕಿ ಪಟ್ಟಣದ ಎನ್ ಎಂ ಎಸ್ ಪ್ರೌಢಶಾಲೆಯ ವಿದ್ಯಾರ್ಥಿನಿ ಅನನ್ಯ ತಂದೆ ನಾಗರಾಜ ಜೋಗಿನ್ 9ನೇ ತರಗತಿ ವಿದ್ಯಾರ್ಥಿನಿ 17 ವರ್ಷ ವಯೋಮಿತಿಯ ಬಾಲಕಿಯರ ವಿಭಾಗದ ಉದ್ದ ಜಿಗಿತ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಹಾಗೂ100ಮೀಟರ್ ಓಟದ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದು ರಾಜ್ಯಮಟ್ಟದ ಅಥ್ಲೆಟಿಕ್ಸ್ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾಳೆ.

ವಿಜೇತ ಕ್ರೀಡಾಪಟುವಿಗೆ ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷರು, ಸದಸ್ಯರು, ಶಾಲಾ ಮುಖ್ಯೋಪಾಧ್ಯಾಯರು, ಶಿಕ್ಷಕರು, ಶಾಲಾ ದೈಹಿಕ ಶಿಕ್ಷಣ ಶಿಕ್ಷಕ ದುರುಗಪ್ಪ , ಮರಿಬಸಪ್ಪ ಅಭಿನಂದಿಸಿದ್ದಾರೆ. ಜಿಲ್ಲಾಮಟ್ಟದ ಅಥ್ಲೆಟಿಕ್ ಕ್ರೀಡಾಕೂಟದಲ್ಲಿವಿಜೇತಳಾದ ಕ್ರೀಡಾಪಟುವನ್ನು ಶಾಲಾ ಆಡಳಿತ ಮಂಡಳಿ ವತಿಯಿಂದ ಸನ್ಮಾನಿಸಲಾಯಿತು.ಈ ಸಂದರ್ಭದಲ್ಲಿ ಮುಖ್ಯೋಪಾಧ್ಯಾಯರು ಶ್ರೀಮತಿ ವಿದ್ಯಾವತಿ ವನಕಿ ಹಾಗೂ ಶಿಕ್ಷಕರು, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಭಾರತದ ಮಾಜಿ ಮಂತ್ರಿ, ಭಾರತ್ ಸ್ಕೌಟ್ಸ್ ಗೈಡ್ಸ್ ಸಂಸ್ಥೆಯ ಕೊಂಡಜ್ಜಿ ಬಸಪ್ಪ ಪುಣ್ಯಸ್ಮರಣೆ

ಯುವ ಮಾರ್ಗ ಸುದ್ದಿ



**ಮಾನ್ವಿ,ನ.15–** ಭಾರತ ಸರ್ಕಾರದ ಮಾಜಿ ಕೇಂದ್ರ ಮಂತ್ರಿ, ಭಾರತ ಸ್ಕೌಟ್ಸ್ ಮತ್ತು ಗೈಡ್ ನ ಕರ್ನಾಟಕ ರಾಜ್ಯ ಮುಖ್ಯಸ್ಥರಾಗಿದ್ದ ಕೊಂಡಜ್ಜಿ ಬಸಪ್ಪ ಅವರ ಪುಣ್ಯಸ್ಮರಣೆಯನ್ನು ಮಾನ್ವಿ ಸ್ಥಳೀಯ ಸಂಸ್ಥೆ ವತಿಯಿಂದ ಮಾನ್ವಿ ಪಬ್ಲಿಕ್ ಶಾಲೆಯಲ್ಲಿ ಆಯದಿಸಲಾಗಿತ್ತು. ಈ ಸಂದರ್ಭದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪ ನಮ್ಮನ ಅರ್ಪಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಂಟಿ ಕಾರ್ಯದರ್ಶಿ ನರಸಿಂಹಮೂರ್ತಿಯವರು ಕೊಂಡಜ್ಜಿ ಬಸಪ್ಪ ಅವರ ಜೀವನ ಚರಿತ್ರೆಯ ಬಗ್ಗೆ ಮಕ್ಕಳಿಗೆ ತಿಳಿಸಿಕೊಟ್ಟರು. ದಾವಣಗೆರೆ ಜಿಲ್ಲೆಯ ಹರಿಹರ ತಾಲೂಕಿನ ಕೊಂಡಜ್ಜಿ ಗ್ರಾಮದಲ್ಲಿ ತಮ್ಮ ಜಮೀನನ್ನು ಸಂಸ್ಥೆಗೆ ದಾರೆ ಹಿರೆದರು. ಇಂದು ಆ ಸಂಸ್ಥೆ ರಾಜ್ಯಮಟ್ಟದ ತರಬೇತಿ ಸಂಸ್ಥೆಯಾಗಿ ಬೆಳೆದಿದೆ. ಅನೇಕ ವಿದ್ಯಾರ್ಥಿಗಳಿಗೆ ಶಿಕ್ಷಕರಿಗೆ ಅಲ್ಲಿ ತರಬೇತಿ ನೀಡಲಾಗುತ್ತಿದೆ ಎಂದು ನುಡಿದರು. ಪ್ರಸ್ತುತ ಸ್ಕೌಟು ಗೈಡ್ ಸಂಸ್ಥೆಯು ಮಾಜಿ ಮಂತ್ರಿ ಪಿಜಿಆರ್ ಹಿಂದೆ ಅವರ ನೇತೃತ್ವದಲ್ಲಿ ಮುನ್ನಡೆದಿದೆ.

## ಕವಿತಾಳ–ಪೋಡಿ ಮುಕ್ತ ಗ್ರಾಮ ಅಭಿಯಾನಕ್ಕೆ ಚಾಲನೆ

ಯುವ ಮಾರ್ಗ ಸುದ್ದಿ



**ಕವಿತಾಳ,ನ.15–**ಪಟ್ಟಣದ ನಾಡಾಕಾರ್ಯಾಲಯದಲ್ಲಿ ಇಂದು ಕಂದಾಯ ಮತ್ತು ಭೂ ದಾಖಲೆ ಇಲಾಖೆಗಳ ಸಹಯೋಗದಲ್ಲಿ ಪೋಡಿ ಮುಕ್ತ ಗ್ರಾಮ ಅಭಿಯಾನಕ್ಕೆ ಭೂ ದಾಖಲೆ ಇಲಾಖೆ ಸಹಾಯಕ ನಿರ್ದೇಶಕ ಮಹ್ಮದ್ ನೂರುದ್ದಿನ್ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು 'ನೆನೆಗುದಿಗೆ ಬಿದ್ದಿರುವ ಪೋಡಿ ಪ್ರಕರಣಗಳಿಗೆ ಶಾಶ್ವತ ಪರಿಹಾರ ನೀಡಲು ಅಭಿಯಾನ ಆರಂಭಿಸಲಾಗಿದೆ, ಜಮೀನುಗಳ ಭೂ ಮಾಪನ ಮಾಡಿ ಪ್ರತ್ಯೇಕ ಪಹಣಿ ನೀಡಲಾಗುವುದು ಆದ್ದರಿಂದ ಜಮೀನುಗಳ ಮಾಲಿಕರು ಅಗತ್ಯ ದಾಖಲೆಗಳನ್ನು ನೀಡುವ ಮೂಲಕ ಅಭಿಯಾನದ ಯಶಸ್ವಿಗೆ ಸಹಕರಿಸುವುದರೊಂದಿಗೆ ರೈತರು ಅಭಿಯಾನದ ಪ್ರಯೋಜನ ಪಡೆದುಕೊಳ್ಳಬೇಕು'ಎಂದು ತಿಳಿಸಿದರು.

ಗ್ರಾಮ ಆಡಳಿತಾಧಿಕಾರಿಗಳಾದ ಸದಾಕಲಿ ಹರಕೇರಿ,ಅನಿಲ್, ಭೂ ದಾಖಲೆಗಳ ತಪಾಸಕ ಮೈನುದ್ದಿನ್ ಸೇರಿದಂತೆ ಇನ್ನಿತರ ಅಧಿಕಾರಿಗಳು ಮತ್ತು ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮದ ರೈತರು ಉಪಸ್ಥಿತರಿದ್ದರು.

## ಪೋಷಕರು ಶಿಕ್ಷಕರು ಮಕ್ಕಳಲ್ಲಿರುವ ಪ್ರತಿಭೆ ಗುರುತಿಸಿ ಉತ್ತೇಜಿಸಬೇಕು: ರಮೇಶಬಾಬು ಯಾಳಗಿ




**ಮಾನ್ವಿ,ನ.15–** ಮಕ್ಕಳು ನಮ್ಮ ದೇಶದ ಭವಿಷ್ಯ, ನಾಳೆಯ ನಾಗರಿಕರು, ಮತ್ತು ನಾಯಕರಾಗಿರು ವುದರಿಂದಾಗಿಮಕ್ಕಳಲ್ಲಿರುವ ಪ್ರತಿಭೆ ಗುರುತಿಸಿ ಉತ್ತೇಜಿಸುವ ಕೆಲಸ ಪೋಷಕರು ಶಿಕ್ಷಕರು ಮಾಡುವುದು ಅಗತ್ಯವಾಗಿದೆ ಎಂದು ಸಾಹಿತಿ ರಮೇಶಬಾಬು ಯಾಳಗಿ ಅವರು ಹೇಳಿದರು.

ಅವರು ಪಟ್ಟಣದ ಕಲ್ಮಠ ಪದವಿ ಪೂರ್ವ ಕಾಲೇಜಿನ ಎನ್ ಎಸ್ ಎಸ್ ಘಟಕದ ವತಿಯಿಂದ ಆಯೋಜಿಸಿದ್ದ ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು.

ಮಕ್ಕಳಿಂದ ನಾವು ಪ್ರೀತಿಯನ್ನು ನಿರೀಕ್ಷಿಸಬೇಕಾದರೆ ನಾವು ಮೊದಲು ಅವರನ್ನು ಪ್ರೀತಿಯಿಂದ ನೋಡಿಕೊಳ್ಳಬೇಕು.ಹೆತ್ತವರು ಮತ್ತು ಶಿಕ್ಷಕರು ಮಕ್ಕಳಿಗೆ ಮಾದರಿಯಾಗಬೇಕು.ಮಕ್ಕಳು ಸಹ ಪುಟ್ಟ ಪುಟ್ಟ ಕನಸುಗಳನ್ನು ಕಂಡು ಅವುಗಳನ್ನು ನನಸು ಮಾಡುವ ದೃಢವಾದ ಮನಸ್ಸನ್ನು ಹೊಂದಿ ಸತತ ಪ್ರಯತ್ನದಿಂದ ದೊಡ್ಡ ದೊಡ್ಡ ಸಾಧನೆ ಮಾಡಿ ಸಾಧಕರಾಗಬೇಕೆಂದು ಮಕ್ಕಳಿಗೆ ಯಾಳಗಿ ಅವರು ಕಿವಿ ಮಾತು ಹೇಳಿದರು.

ಇದೇ ಸಂದರ್ಭದಲ್ಲಿ ಕಲ್ಮಠದ ಸುವರ್ಣ ದಸರಾ ಮಹೋತ್ಸವದ ಭವ್ಯ ಮೆರವಣಿಗೆಯಲ್ಲಿ ಸ್ತಬ್ಧ ಚಿತ್ರ ಪ್ರದರ್ಶನ ಗೈದ ವಿವಿಧ ಶಾಲೆಗಳ ವಿಜೇತ ವಿದ್ಯಾರ್ಥಿಗಳೊಂದಿಗೆ ಆಗಮಿಸಿದ್ದ ಶಿಕ್ಷಕರಿಗೂ ಸನ್ಮಾನಿಸಿ ಬಹುಮಾನ ವಿತರಿಸಲಾಯಿತು.ಕಾಲೇಜಿನ ಪ್ರಾಚಾರ್ಯ ಎಸ್.ಎಸ್.ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.ಕಲ್ಮಠ ಪದವಿ ಕಾಲೇಜಿನ ಪ್ರಾಚಾರ್ಯ ಸಿದ್ದನಗೌಡ ಪಾಟೀಲ ಕಲ್ಮಠ ಅನುದಾನಿತ ಹಿರಿಯ ಪ್ರಾಥಮಿಕ ಶಾಲೆಯ ಹಿರಿಯ ಶಿಕ್ಷಕ ಕೇಮ್ಯಾನಾಯಕ ಮತ್ತು ವಿದ್ಯಾರ್ಥಿಗಳ ಪ್ರತಿನಿಧಿ ಕು.ಎಂ. ಸಾವಿತ್ರಿ ಹಾಗೂ ಗವಿರಾಜ ವೇದಿಕೆಯಲ್ಲಿ ಉಪಸ್ಥಿತರಿದ್ದರು.ಕಲಾವಿಭಾಗದ ವಿದ್ಯಾರ್ಥಿನಿ ಕು.ದೇವಮ್ಮ ಪಂ. ಜವಹರಲಾಲ್ ನೆಹರೂ ಅವರ ಜೀವನ ಮತ್ತು ಸಾಧನೆ ಕುರಿತು ಅನಿಸಿಕೆ ವ್ಯಕ್ತಪಡಿಸಿದರು.ವಾಣಿಜ್ಯ ವಿಭಾಗದ ವಿದ್ಯಾರ್ಥಿನಿ ಕು.ಮಹೇಶ್ವರಿ,ಪ್ರಾರ್ಥನಾ ಗೀತೆ ಹಾಡಿದರು.ಎನ್ ಸಿ ಸಿ ಅಧಿಕಾರಿ ಹಾಗೂ ಹಿರಿಯ ದೈಹಿಕ ಶಿಕ್ಷಣ ಉಪನ್ಯಾಸಕ ವಿರುಪಣ್ಣ ಪಾಟೀಲ ಸ್ವಾಗತಿಸಿದರು.ಉಪನ್ಯಾಸಕ ಮಾರ್ಟಿನ್ ಕಾರ್ಯಕ್ರಮ ನಿರೂಪಿಸಿದರು.ರಾಷ್ಟ್ರೀಯ ಸೇವಾ ಯೋಜನಾ ಘಟಕದ ಕಾರ್ಯಕ್ರಮಾಧಿಕಾರಿ ನರಸಣ್ಣ ಸುಂಕೇಶ್ವರ ವಂದಿಸಿದರು.

## ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಒಂದು ದಿನದ ಉಚಿತ ತರಬೇತಿ ಕಾರ್ಯಗಾರ

**ಮಾನ್ವಿ,ನ.15–** ಪಟ್ಟಣದ ಕಲ್ಮಠ ಗುರುಭವನದಲ್ಲಿ ನ.17 ರಂದು ಬೆಳಿಗ್ಗೆ 9ಕ್ಕೆ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಬೆಂಗಳೂರು ತಾಲೂಕು ಘಟಕ ಮಾನ್ವಿ ಹಾಗೂ ಅ.ಖಿ.ಭಾ.ವೀ.ಲಿಂ.ಮಹಾಸಭಾ ಮಾನ್ವಿ ,ಸಿರವಾರ,ಕವಿತಾಳ, ತಾ.ಮಾಧ್ಯಮ ಸಮಿತಿ, ಖಾಸಗಿ ಕಾಲೇಜುಗಳ ಆಡಳಿತ ಮಂಡಳಿಗಳ ಒಕ್ಕೂಟ ಮಾನ್ವಿ ಘಟಕ, ಖಾಸಗಿ ಕಾಲೇಜುಗಳ ಉಪನ್ಯಾಸಕರ ಸಂಘ ಮಾನ್ವಿ ತಾ. ಘಟಕ, ಕಲ್ಮಠ ಶಿಕ್ಷಣ ಸಮೂಹ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ವಿಶೇಷ ಸಂಪನ್ಮೂಲ ವ್ಯಕ್ತಿಗಳಾದ ವಿಜಯಪುರ ಚಾಣಕ್ಯ ಕರಿಯರ್ ಅಕಾಡೆಮಿ ಸಂಸ್ಥಾಪಕರಾದ ಶ್ರೀ, ಎನ್.ಎಮ್. ಬಿರಾದಾರ ರವರಿಂದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಒಂದುದಿನದ ಉಚಿತ ತರಬೇತಿ ಕಾರ್ಯಗಾರ ನಡೆಯಲಿದ್ದು ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಕಲ್ಮಠ ಶ್ರೀ ವೀರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಲಿದ್ದು. ಮಾನ್ವಿ ತಾ.ಪಂ. ಇ.ಓ. ಶ್ರೀ. ಪುರುರಾಜ್ ಸಿಂಗ್ ಸೋಲಂಕಿ ಐ.ಎ.ಎಸ್. ಉದ್ಘಾಟಿಸಲಿದ್ದು, ಅಧ್ಯಕ್ಷತೆಯನ್ನು ತಹಸೀಲ್ದಾರ್ ಶ್ರೀ ಭೀಮರಾಯ ಬಿ.ರಾಮಸಮುದ್ರ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ತಾ.ಪಂ.ಸಹಾಯಕ ನಿರ್ದೇಶಕರಾದ ಖಾಲೀದ್ ಅಹ್ಮದ್,ಪಿ.ಐ. ಸೋಮಶೇಖರ ಎಸ್.ಕೆಂಚರೆಡ್ಡಿ, ಕಲ್ಮಠ ಶಿಕ್ಷಣ ಸಂಸ್ಥೆಗಳ ಆಡಳಿತಾಧಿಕಾರಿಗಳಾದ ಸಂಗಯ್ಯಸ್ವಾಮಿ, ಖಾಸಗಿ ಕಾಲೇಜುಗಳ ಆಡಳಿತ ಮಂಡಳಿಗಳ ಒಕ್ಕೂಟದ ತಾ.ಅಧ್ಯಕ್ಷರಾದ ತಿಪ್ಪಣ್ಣ ಬಾಗಲವಾಡ, ಖಾಸಗಿ ಕಾಲೇಜುಗಳ ಉಪನ್ಯಾಸಕರ ಸಂಘ ಮಾನ್ವಿ ತಾ. ಘಟಕದ ಅಧ್ಯಕ್ಷರಾದ ಆಂಜನೇಯ್ಯ ನಸಲಾಪುರ, ಸೇರಿದಂತೆ ತಾ.ವಿವಿಧ ಕಾಲೇಜುಗಳ ಆಡಳಿತ ಮಂಡಳಿಗಳ ಅಧ್ಯಕ್ಷರು, ಪ್ರಾಂಶುಪಾಲರು, ಉಪನ್ಯಾಸಕರು, ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ ಎಂದು ಅ.ಖಿ.ಭಾ.ವೀ.ಲಿಂ.ಮಹಾಸಭಾ ಮಾನ್ವಿ ತಾ.ಘಟಕದ ಅಧ್ಯಕ್ಷರಾದ ಅರುಣ್ ಚಂದಾ ಹಾಗೂ ಅ.ಭಾ.ವೀ.ಲಿಂ.ಮಹಾಸಭಾ ಮಾಧ್ಯಮ ಸಮಿತಿ ಅಧ್ಯಕ್ಷರಾದ ರಾಜಶೇಖರ ಸ್ವಾಮಿ ಎಂ.ಹೆಚ್.ಎಂ ಪ್ರಕಟಣೆಯಲ್ಲಿ ಕೋರಿದ್ದಾರೆ.

## ಇಂದು ಕಮ್ಮವಾರಿ ಸಂಘದ ವತಿಯಿಂದ ಕಾರ್ತಿಕಮಾಸ ವನಭೋಜನ

**ಮಾನ್ವಿ,ನ.15–**ಪಟ್ಟಣದ ಕಾಕತೀಯ ವಿದ್ಯಾಸಂಸ್ಥೆ ಆವರಣದಲ್ಲಿ ನ.16 ರಂದು ತಾಲೂಕು ಕಮ್ಮವಾರಿ ಸಂಘದ ವತಿಯಿಂದ ಕಾರ್ತಿಕಮಾಸ ವನಭೋಜನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು ಕಲ್ಮಠ ಶ್ರೀ ವೀರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳ ದಿವ್ಯಸಾನಿಧ್ಯದಲ್ಲಿ ಬೆ.6ಕ್ಕೆ ಸಾಮೂಹಿಕ ಶ್ರೀ ರಮಾ ಸತ್ಯನಾರಾಯಣ ಸ್ವಾಮಿ ವೃತ ಪೂಜಾ ಕಾರ್ಯಕ್ರಮ, ಕಾರ್ತಿಕ ಮಾಸ ಮಹತ್ವ ಕುರಿತು ಡಾ.ವಾಣಿ ಕುಮಾರಿ ಮದ್ದುಕೂರಿ ರಾಜಮಂಡ್ರಿ, ಹಾಗೂ ಕೆ.ಸಾಯಿ ಪವನ್ ಶರ್ಮ ರವರಿಂದ ಪ್ರವಚನ, ಮುಖ್ಯ ಅತಿಥಿಗಳಾಗಿ ರಾಜ್ಯ ಸಚಿವರಾದ ಎನ್.ಎಸ್,ಬೋಸರಾಜು, ಶಾಸಕ ಹಂಪಯ್ಯನಾಯಕ, ಅಖಿಲ ಕರ್ನಾಟಕ ಕಮ್ಮವಾರಿ ಸಂಘದ ಅಧ್ಯಕ್ಷರಾದ ಲಯನ್ ಗಾರಪಾಟಿ ರಾಮಕೃಷ್ಣ, ಸೇರಿದಂತೆ ಗಣ್ಯರು ಭಾಗವಹಿಸಲಿದ್ದಾರೆ. ಕಾಕತೀಯ ವಿದ್ಯಾಸಂಸ್ಥೆಯ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು, ಬಾಲಕಿಯರಿಗಾಗಿ ಮತ್ತು ಮಹಿಳೆಯರಿಗಾಗಿ ಲೆಮನ್ ಸ್ಪೂನ್ ಗೇಮ್, ಸಂಗೀತ ಕುರ್ಚಿ, ಸೇರಿದಂತೆ ವಿವಿಧ ಆಟೋಟಗಳನ್ನು ಮನೋರಂಜನೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು ಮಧ್ಯಾಹ್ನ–12 ಕ್ಕೆ ಸಾಮೂಹಿಕ ಕಾರ್ತಿಕಮಾಸದ ವನಭೋಜನ ಕಾರ್ಯಕ್ರಮ ನಡೆಯಲಿದೆ. ಕಾರ್ಯಕ್ರಮದಲ್ಲಿ ತಾಲೂಕಿನ ಕಮ್ಮ ಸಮುದಾಯದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ತಾಲೂಕು ಕಮ್ಮವಾರಿ ಸಂಘದ ಅಧ್ಯಕ್ಷರಾದ ನೆಕ್ಕಂಟಿ ಶ್ರೀನಿವಾಸರಾವ್ ಕೋರಿದ್ದರೆ.

## ರಂಜಣಗಿ: ಮಕ್ಕಳ ದಿನಾಚರಣಿ



**ಜೇವರ್ಗಿ,ನ.15–**ತಾಲ್ಲೂಕಿನ ರಂಜಣಗಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ದಿನಾಚರಣೆ ಅಂಗವಾಗಿ ಪೋಷಕ ಶಿಕ್ಷಕರ ಮಹಾಸಭೆಯ ಕಾರ್ಯಕ್ರಮ ಬಹಳ ಸಂಭ್ರಮದಿಂದ ಆಚರಿಸಲಾಯಿತು.

ಎಸ್‌ಡಿಎಂಸಿ ಅಧ್ಯಕ್ಷ ರಾವುತರಾಯ ಕೆಲ್ಲೂರ ಕಾರ್ಯಕ್ರಮ ಉದ್ಘಾಟಿಸಿದರು. ಹಾಗೂ ,ಉಪಾಧ್ಯಕ್ಷ ನಿಂಗಣ್ಣ ಪುಜಾರಿ ಹಾಗೂ ಗ್ರಾಮ ಪಂಚಾಯತಿ ಸದಸ್ಯರು ಶ್ರೀ ಭಾಗಣ್ಣ ದೆಸಾಯಿ,ಶ್ರೀ ಸಾಹೇಬ ಪಟೇಲ್ ಹಡಗಿನಾಳ ಹಾಗೂ ಪೋಷಕರು ಹಿರಿಯರು, ಶಿಕ್ಷಣ ಪ್ರೇಮಿಗಳು ಯುವಕ ಮೀತ್ರರರು ಉಪಸ್ಥಿತ ಇದ್ದು ಈ ವೇಳೆ ಸಂವಿಧಾನ ಪೀಠಿಕೆ ಓದಿಸಲಾಯಿತು.ಹಾಗೂ ನಮ್ಮ ಶಾಲೆಯ ಮುಖ್ಯ ಗುರುಗಳು ಶ್ರೀ ಮಹೇಶ್ ಬಿರಾದಾರ ಪೊಟು ಪೂಜೆ ನೆರವೇರಿಸಿದರು.ಹಾಗೂ ಮಹಾಂತೇಶ ಎನ್ ಪಾಟೀಲ ಕವಿ ಇವರು ಸ್ವಾಗತಿಸಿದರು ಶ್ರೀ ಬಸವಂತ್ರಾಯ ಸರ್ ಪ್ರಾಸ್ತಾವಿಕ ನುಡಿಗಳು ಆಡಿದರು.ಶ್ರೀ ವಿಶ್ವನಾಥ ದ್ಯಾಮಗೊಂಡ ಸ,ಶಿ ನಿರೂಪಿಸಿದರು ಶ್ರೀ ಮತಿ ಶಶಿಕಲಾ ರಾಠೋಡ,ಸೀಮಾ ಕಾಂಬಳೆ,ಶ್ರೀ ಮತಿ ಜಾಕಿಯಾ ಸುಲ್ತಾನ್, ಶಾಲಿನಿ ಮೇಡಂ ಉಪಸ್ಥಿತ ಇದ್ದು ಕಾರ್ಯಕ್ರಮ ಯಶಸ್ಸು ಗೊಳಿಸಿದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H